ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 86 Tuesday **22-09-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 86 ಮಂಗಳವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಮಳೆ ಕೊರತೆ: 57 ಕೆರೆಗಳಿಗೆ ನೀರು ಹರಿವು ಸ್ಥಗಿತದ ಆತಂಕ

60 ದಿನ ಮುಂಚಿತವಾಗಿಯೇ ಸ್ಥಗಿತದ ಭೀತಿ । 2026ರಲ್ಲಿ ಒಂದೂ ಕೆರೆ ತುಂಬಿಲ್ಲ

“ಮುಂಜಾನೆಯ ಮೆರಗು”

ಜಗಳೂರು ಸೆ, 21– ಮಳೆ ಕೊರತೆ–ಯ ಪರಿಣಾಮ ಜಗಳೂರು ವಿಧಾನಸಭಾ ಕ್ಷೇತ್ರದ 57 ಕೆರೆಗಳಿಗೆ ನೀರು ತುಂಬಿಸುವ ಮಹತ್ವಾಕಾಂಕ್ಷೆಯ ಯೋಜನೆಗೆ ಇದೀಗ ಆತಂಕದ ಕಾರ್ಮೋಡ ಆವರಿಸಿದೆ. ತುಂಗಭದ್ರಾ ಜಲಾಶಯಕ್ಕೆ ಒಳಹರಿವು ಕಡಿಮೆಯಾಗುತ್ತಿರುವ ಹಿನ್ನೆಲೆಯಲ್ಲಿ ಜಗಳೂರು ತಾಲೂಕಿನ ಕೆರೆಗಳಿಗೆ ಹರಿಸಲಾಗುತ್ತಿರುವ ನೀರು ಯಾವುದೇ ಕ್ಷಣದಲ್ಲಿ ಸ್ಥಗಿತಗೊಳ್ಳುವ ಸಾಧ್ಯತೆ ಎದುರಾಗಿದೆ.

ಜಗಳೂರು ತಾಲೂಕಿನ ಬಹುತೇಕ ಪ್ರದೇಶಗಳು ಮಳೆಯಾಶ್ರಿತವಾಗಿದ್ದು, ಕೃಷಿ ಮತ್ತು ಅಂತರ್ಜಲದ ಪ್ರಮುಖ ಆಧಾರ ಕೆರೆಗಳಾಗಿವೆ. ಈ ಹಿನ್ನೆಲೆಯಲ್ಲಿ 57 ಕೆರೆಗಳಿಗೆ ನೀರು ತುಂಬಿಸುವ ಯೋಜನೆ ರೈತರಿಗೆ ಮಹತ್ವದ ಆಶಾಕಿರಣವಾಗಿತ್ತು. ಆದರೆ ಪ್ರಸಕ್ತ ವರ್ಷ ಮಳೆಯ ಪ್ರಮಾಣದಲ್ಲಿ ತೀವ್ರ ಕೊರತೆ ಉಂಟಾಗಿರುವುದರಿಂದ ಯೋಜನೆಯ ನಿರಂತರತೆಗೆ ಪ್ರಶ್ನೆ ಎದುರಾಗಿದೆ.

ಮಲೆನಾಡಿನ ಮಳೆಯೇ ಜಗಳೂರಿನ ಕೆರೆಗಳಿಗೆ ಆಧಾರ

57 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯಡಿ ತುಂಗಭದ್ರಾ ಜಲಾಶಯ ಹಾಗೂ ಅದರ ಜಲಾನಯನ ಪ್ರದೇಶದಲ್ಲಿ ಲಭ್ಯವಾಗುವ ನೀರಿನ ಪ್ರಮಾಣದ ಆಧಾರದ ಮೇಲೆ ಜಗಳೂರು ತಾಲೂಕಿನ ಕೆರೆಗಳಿಗೆ ನೀರು ಹರಿಸಲಾಗುತ್ತದೆ. ಮಲೆನಾಡು ಭಾಗದಲ್ಲಿ ಉತ್ತಮ ಮಳೆಯಾದರೆ ಜಲಾಶಯಕ್ಕೆ ಹೆಚ್ಚಿನ ಪ್ರಮಾಣದಲ್ಲಿ ನೀರು ಹರಿದುಬಂದು, ಅದರ ಪರಿಣಾಮವಾಗಿ ಜಗಳೂರು ಭಾಗದ ಕೆರೆಗಳಿಗೂ ನೀರು ಲಭ್ಯವಾಗುತ್ತದೆ.

ಆದರೆ ಈ ಬಾರಿ ಮಲೆನಾಡು ಭಾಗದಲ್ಲಿಯೂ ಮಳೆಯ ಕೊರತೆ ಕಂಡುಬಂದಿರುವುದರಿಂದ ಜಲಾಶಯದ ನೀರಿನ ಸಂಗ್ರಹದ ಮೇಲೆ ಒತ್ತಡ ಉಂಟಾಗಿದೆ. ಜಲಾಶಯದಲ್ಲಿ ನೀರಿನ ಮಟ್ಟ ಕುಸಿದಂತೆ ಜಗಳೂರಿಗೆ ಹರಿಸಬಹುದಾದ ನೀರಿನ ಪ್ರಮಾಣವೂ ಕಡಿಮೆಯಾಗುವ ಸಾಧ್ಯತೆ ಇದೆ.



“ನದಿಯಲ್ಲಿ ದೊರೆಯುವಷ್ಟು ನೀರು ಮಾತ್ರ ಹರಿಸಲಾಗುತ್ತಿದೆ”

ಜಗಳೂರು: 57 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯಡಿ ಸದ್ಯ ನದಿಯಲ್ಲಿ ಲಭ್ಯವಾಗುವಷ್ಟು ನೀರನ್ನು ಮಾತ್ರ ಹರಿಸಲಾಗುತ್ತಿದೆ. ಜಲಾಶಯದ ನೀರಿನ ಲಭ್ಯತೆ ಹಾಗೂ ಮಳೆಯ ಪರಿಸ್ಥಿತಿಯನ್ನು ಅವಲಂಬಿಸಿ ನೀರು ಹರಿಸುವ ಪ್ರಕ್ರಿಯೆ ಮುಂದುವರಿಯಲಿದೆ. ಯಾವ ಸಂದರ್ಭದಲ್ಲಿ ನೀರು ಸ್ಥಗಿತಗೊಳ್ಳಲಿದೆ ಎಂಬುದನ್ನು ಈಗಲೇ ನಿಖರವಾಗಿ ಹೇಳಲು ಸಾಧ್ಯವಿಲ್ಲ. ಜಲಾಶಯಕ್ಕೆ ಹೆಚ್ಚಿನ ಪ್ರಮಾಣದಲ್ಲಿ ನೀರು ಬರಬೇಕಾದರೆ ಮಲೆನಾಡು ಭಾಗದಲ್ಲಿ ಉತ್ತಮ ಮಳೆಯಾಗಬೇಕಿದೆ.

--- ಆನಂದ್, ಎಇ, 57 ಕೆರೆಗಳಿಗೆ ನೀರು ತುಂಬಿಸುವ ಯೋಜನೆ

120 ದಿನ ನೀರು ಹರಿಸುವ ಯೋಜನೆ; 60 ದಿನ ಮುಂಚೆಯೇ ನಿಲ್ಲುವ ಭೀತಿ

ಯೋಜನೆಯ ಪ್ರಕಾರ ಜುಲೈ, ಆಗಸ್ಟ್, ಸೆಪ್ಟೆಂಬರ್ ಹಾಗೂ ಅಕ್ಟೋಬರ್ ತಿಂಗಳ ಅವಧಿಯಲ್ಲಿ ಸುಮಾರು 120 ದಿನಗಳ ಕಾಲ ಕೆರೆಗಳಿಗೆ ನೀರು ಹರಿಸುವ ಪ್ರಕ್ರಿಯೆ ನಡೆಯಬೇಕಿದೆ. ಆದರೆ ಮಳೆ ಕೊರತೆಯಿಂದಾಗಿ ನಿಗದಿತ ಅವಧಿ ಪೂರ್ಣಗೊಳ್ಳುವ ಮೊದಲೇ ನೀರು ಹರಿಸುವುದನ್ನು ಸ್ಥಗಿತಗೊಳಿಸುವ ಪರಿಸ್ಥಿತಿ ಎದುರಾಗಬಹುದು.

ಅಕ್ಟೋಬರ್‌ವರೆಗೆ ನೀರು ಹರಿಯಬೇಕಿದ್ದರೂ, ಪ್ರಸ್ತುತ ಜಲಾಶಯದ ನೀರಿನ ಲಭ್ಯತೆ ಕಡಿಮೆಯಾಗುತ್ತಿರುವ ಹಿನ್ನೆಲೆಯಲ್ಲಿ ಸುಮಾರು 60 ದಿನಗಳ ಮುಂಚಿತವಾಗಿಯೇ ನೀರು ಸ್ಥಗಿತಗೊಳ್ಳುವ ಆತಂಕ ರೈತರಲ್ಲಿ ಮೂಡಿದೆ.

2026ರಲ್ಲಿ ಒಂದೂ ಕೆರೆ ತುಂಬಿಲ್ಲ!

ಕಳೆದ ಎರಡು ವರ್ಷಗಳಲ್ಲಿ ಜಗಳೂರು ವಿಧಾನಸಭಾ ಕ್ಷೇತ್ರದಲ್ಲಿ ಉತ್ತಮ ಮಳೆಯಾಗಿತ್ತು. ಅದರ ಜತೆಗೆ 57 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯಡಿ ನೀರು ಹರಿದು ಬಂದ ಪರಿಣಾಮ ಹಲವು ಕೆರೆಗಳು ಕೋಡಿ ಬಿದ್ದು ಹರಿದಿದ್ದವು. ಇದರಿಂದ ರೈತರಲ್ಲಿ ಕೃಷಿ ಚಟುವಟಿಕೆಗಳಿಗೆ ಹೊಸ ಭರವಸೆ ಮೂಡಿತ್ತು.

ಆದರೆ 2026ರ ಪರಿಸ್ಥಿತಿ ಸಂಪೂರ್ಣ ಭಿನ್ನವಾಗಿದೆ. ಈ ವರ್ಷ ಕೆರೆಗಳು ಕೋಡಿ ಬೀಳುವುದು ದೂರದ ಮಾತಾಗಿದ್ದು, ಒಂದೇ ಒಂದು ಕೆರೆಯೂ ಸಂಪೂರ್ಣವಾಗಿ ತುಂಬಿಲ್ಲ ಎಂಬುದು ರೈತರ ಆತಂಕವನ್ನು ಮತ್ತಷ್ಟು ಹೆಚ್ಚಿಸಿದೆ.

ಮಳೆ ಬಾರದಿದ್ದರೂ ಯೋಜನೆಯಡಿ ಕೆರೆಗಳಿಗೆ ನೀರು ಬರುತ್ತದೆ ಎಂಬ ನಿರೀಕ್ಷೆಯಲ್ಲಿದ್ದ ರೈತರಿಗೆ ಇದೀಗ ನೀರು ಸ್ಥಗಿತಗೊಳ್ಳುವ ಸಾಧ್ಯತೆ ಮತ್ತೊಂದು ಆಘಾತ ನೀಡಿದೆ.

ಕೆರೆಗಳಲ್ಲಿ ನೀರಿದ್ದರೆ ಅಂತರ್ಜಲಕ್ಕೆ ಜೀವ

ಜಗಳೂರಿನಂತಹ ಮಳೆಯಾಶ್ರಿತ ಪ್ರದೇಶದಲ್ಲಿ ಕೆರೆಗಳು ಕೇವಲ ನೀರು ಸಂಗ್ರಹಿಸುವ ತಾಣಗಳಲ್ಲ. ಅವು ಅಂತರ್ಜಲ ಮರುಪೂರಣದ ಪ್ರಮುಖ ಮೂಲಗಳಾಗಿವೆ.

ಕೆರೆಗಳಲ್ಲಿ ನೀರು ಸಂಗ್ರಹವಾದಾಗ ಸುತ್ತಮುತ್ತಲಿನ ಪ್ರದೇಶದ ಅಂತರ್ಜಲ ಮಟ್ಟ ಹೆಚ್ಚಾಗುತ್ತದೆ. ಬೋರ್‌ವೆಲ್‌ಗಳಿಗೆ ನೀರು ಮರುಪೂರಣವಾಗುವುದರಿಂದ ಕೃಷಿ ಹಾಗೂ ಕುಡಿಯುವ ನೀರಿನ ಸಮಸ್ಯೆಯೂ ಕೆಲಮಟ್ಟಿಗೆ ಕಡಿಮೆಯಾಗುತ್ತದೆ. ಆದರೆ ಕೆರೆಗಳಿಗೆ ನೀರು ಹರಿವು ಸ್ಥಗಿತಗೊಂಡು, ಬಿಸಿಲಿನ ತಾಪಮಾನ ಮುಂದುವರಿದರೆ ಕೆರೆಗಳಲ್ಲಿರುವ ನೀರು ವೇಗವಾಗಿ ಆವಿಯಾಗುವ ಸಾಧ್ಯತೆಯಿದೆ.

ಇದರ ಪರಿಣಾಮ ಮುಂದಿನ ದಿನಗಳಲ್ಲಿ ಬೋರ್‌ವೆಲ್‌ಗಳಲ್ಲಿಯೂ ನೀರಿನ ಮಟ್ಟ ಕುಸಿಯುವ ಆತಂಕ ರೈತರಲ್ಲಿ ವ್ಯಕ್ತವಾಗಿದೆ.

ಮುಂದಿನ ದಿನಗಳಲ್ಲಿ ಜಲ ಸಂಕಷ್ಟದ ಭೀತಿ

ಕೆರೆಗಳಿಗೆ ನೀರು ಹರಿಸುವ ಪ್ರಕ್ರಿಯೆ ಸ್ಥಗಿತಗೊಂಡು, ಮಳೆಯೂ ಕೈಕೊಟ್ಟರೆ ಮುಂದಿನ ದಿನಗಳಲ್ಲಿ ಜಗಳೂರು ತಾಲೂಕಿನಲ್ಲಿ ಜಲ ಸಂಕಷ್ಟ ಮತ್ತಷ್ಟು ತೀವ್ರವಾಗುವ ಸಾಧ್ಯತೆಯಿದೆ.

ಈಗಾಗಲೇ ಹಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗುವ ಮುನ್ಸೂಚನೆ ಕಂಡುಬರುತ್ತಿದ್ದು, ಕೃಷಿ ಚಟುವಟಿಕೆಗಳಿಗೂ ನೀರಿನ ಕೊರತೆ ದೊಡ್ಡ ಸವಾಲಾಗಬಹುದು. ಕೆರೆಗಳು ಖಾಲಿಯಾದರೆ ಅದರ ನೇರ ಪರಿಣಾಮ ಅಂತರ್ಜಲದ ಮೇಲೂ ಬೀಳಲಿದ್ದು, ಬೋರ್‌ವೆಲ್‌ಗಳನ್ನು ಅವಲಂಬಿಸಿರುವ ರೈತರು ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆ ಇದೆ.

ನೀರಿನ ಹರಿವು ಯಾವಾಗ ನಿಲ್ಲಲಿದೆ ಎಂಬ ಆತಂಕ

57 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯ ನೀರಿನ ಹರಿವು ಮುಂದುವರಿಯಬೇಕಾದರೆ ಜಲಾಶಯದ ನೀರಿನ ಲಭ್ಯತೆ ಅತ್ಯಂತ ಮುಖ್ಯವಾಗಿದೆ. ಜಲಾಶಯಕ್ಕೆ ನಿರೀಕ್ಷಿತ ಪ್ರಮಾಣದಲ್ಲಿ ಒಳಹರಿವು ಬರದಿದ್ದರೆ ಈಗಾಗಲೇ ಹರಿಯುತ್ತಿರುವ ನೀರಿನ ಪ್ರಮಾಣವನ್ನೂ ಕಡಿಮೆ ಮಾಡುವ ಅನಿವಾರ್ಯತೆ ಎದುರಾಗಬಹುದು.

ಹೀಗಾಗಿ ಮಲೆನಾಡು ಭಾಗದಲ್ಲಿ ಮತ್ತೆ ಉತ್ತಮ ಮಳೆಯಾಗಿ ಜಲಾಶಯದ ನೀರಿನ ಮಟ್ಟ ಸುಧಾರಿಸಬೇಕೆಂಬುದು ಜಗಳೂರು ರೈತರ ಪ್ರಮುಖ ನಿರೀಕ್ಷೆಯಾಗಿದೆ.



“ಮಳೆಯೇ ಎಲ್ಲದಕ್ಕೂ ಮೂಲ”

ಮಳೆ ಕೊರತೆಯಾದರೆ ಅದರ ನೇರ ಪರಿಣಾಮ ಕೆರೆಗಳು, ಅಂತರ್ಜಲ ಮತ್ತು ಕೃಷಿಯ ಮೇಲೆ ಬೀಳುತ್ತದೆ. ವರುಣದೇವನ ಕೃಪೆ ದೊರೆತು ಉತ್ತಮ ಮಳೆಯಾದರೆ ಮಾತ್ರ ಕೆರೆಗಳಿಗೆ ಸಾಕಷ್ಟು ಪ್ರಮಾಣದಲ್ಲಿ ನೀರು ಹರಿದುಬರಲು ಸಾಧ್ಯ. ಕೆರೆಗಳು ತುಂಬಿದಾಗ ಮಾತ್ರ ಅಂತರ್ಜಲವೂ ವೃದ್ಧಿಯಾಗುತ್ತದೆ. ಆದ್ದರಿಂದ ಮಳೆಯ ನಿರೀಕ್ಷೆಯಲ್ಲಿರುವ ರೈತರಿಗೆ ಕೆರೆಗಳಿಗೆ ನೀರು ಹರಿಯುವುದೇ ದೊಡ್ಡ ಆಶಾಕಿರಣವಾಗಿದೆ.

--- ರಾಘವೇಂದ್ರ, ನೀರಾವರಿ ಹೋರಾಟಗಾರ

ಜಗಳೂರಿನಲ್ಲಿ ನೂತನ ಸುಸಜ್ಜಿತ ತಾಲೂಕು ಆಸ್ಪತ್ರೆ ನಿರ್ಮಾಣಕ್ಕೆ ಕ್ರಮ: ಶಾಸಕ ಬಿ.ದೇವೇಂದ್ರಪ್ಪ

“ಮುಂಜಾನೆಯ ಮೆರಗು”

ಜಗಳೂರು ಸೆ, 21– ಜಗಳೂರಿನ ನೂತನ ಸಾರ್ವಜನಿಕ ತಾಲೂಕು ಆಸ್ಪತ್ರೆಯ ಆಧುನಿಕ ಕಾಮಗಾರಿಗೆ ಸಂಬಂಧಿಸಿದಂತೆ ಶಾಸಕ ಬಿ.ದೇವೇಂದ್ರಪ್ಪ ಅವರು ಆರೋಗ್ಯ ಸಚಿವ ಯು.ಟಿ.ಖಾದರ್ ಅವರನ್ನು ಬೆಂಗಳೂರಿನಲ್ಲಿ ಭೇಟಿ ಮಾಡಿ ಚರ್ಚಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಬಿ.ದೇವೇಂದ್ರಪ್ಪ, ಜಗಳೂರಿನಲ್ಲಿ ಸುಸಜ್ಜಿತ ತಾಲೂಕು ಆಸ್ಪತ್ರೆ ನಿರ್ಮಾಣ ಮಾಡುವುದು ತಮ್ಮ ಹಾಗೂ ತಮ್ಮ ತಂದೆಯವರ ಬಹುದಿನಗಳ ಕನಸಾಗಿದೆ ಎಂದು ತಿಳಿಸಿದರು.

ತಾವು ಇದೇ ಆಸ್ಪತ್ರೆಯಲ್ಲಿ ಕಿರಿಯ ವಯಸ್ಸಿನಲ್ಲಿ ಸೇವೆ ಸಲ್ಲಿಸಿದ್ದ ಸಂದರ್ಭದಲ್ಲಿ ಸಾರ್ವಜನಿಕರು ಎದುರಿಸುತ್ತಿದ್ದ ಸಮಸ್ಯೆಗಳನ್ನು ಹತ್ತಿರದಿಂದ ಗಮನಿಸಿದ್ದೇನೆ. ಆಸ್ಪತ್ರೆಯಲ್ಲಿ ಹಲವು ಸೌಲಭ್ಯಗಳನ್ನು ಕಲ್ಪಿಸಲು ಪ್ರಯತ್ನಿಸಿದ್ದರೂ, ಮೂಲಭೂತ ಕಟ್ಟಡ ಹಾಗೂ ಅಗತ್ಯ ಸೌಲಭ್ಯಗಳ ಅಭಿವೃದ್ಧಿ ಆಗಬೇಕಾದ ಅವಶ್ಯಕತೆ ಇತ್ತು ಎಂದು ಹೇಳಿದರು.

ನೂತನ ತಾಲೂಕು ಆಸ್ಪತ್ರೆ ನಿರ್ಮಾಣದ ರೂಪರೇಖೆಗಳು ಹಾಗೂ ಅಗತ್ಯ ಸೌಲಭ್ಯಗಳ ಕುರಿತು ಆರೋಗ್ಯ ಸಚಿವರೊಂದಿಗೆ ಚರ್ಚಿಸಲಾಗಿದೆ. ಮುಂದಿನ ದಿನಗಳಲ್ಲಿ ಜಗಳೂರಿನಂತಹ ಗ್ರಾಮೀಣ ಪ್ರದೇಶದಲ್ಲಿ ಸುಸಜ್ಜಿತ ಹಾಗೂ ಆಧುನಿಕ ತಾಲೂಕು ಆಸ್ಪತ್ರೆ ನಿರ್ಮಾಣವಾಗುತ್ತಿರುವುದು ಕ್ಷೇತ್ರದ ಜನರಿಗೆ ಮಹತ್ವದ ಸೌಲಭ್ಯವಾಗಲಿದೆ ಎಂದರು.

“ಜಗಳೂರು ಜನರ ಬಹುದಿನಗಳ ಕನಸು ನನಸಾಗುವ ಹಂತಕ್ಕೆ ಬಂದಿರುವುದು ಸಂತಸದ ಸಂಗತಿ. ಈ ಯೋಜನೆ ಸಾಕಾರಗೊಳ್ಳಲು ಸಹಕರಿಸಿದ ಎಲ್ಲರಿಗೂ ಎಷ್ಟು ಧನ್ಯವಾದ ಹೇಳಿದರೂ ಕಡಿಮೆಯೇ” ಎಂದು ಅವರು ತಿಳಿಸಿದ್ದಾರೆ.

ಬಂದ್ ಎಫೆಕ್ಟ್: ಆಸ್ಪತ್ರೆಗೆ ತೆರಳಲು ವೃದ್ಧರು, ಹಸುಗೂಸಿನ ಪೋಷಕರ ಪರದಾಟ

“ಮುಂಜಾನೆಯ ಮೆರಗು”

ಜಗಳೂರು ಸೆ, 21– ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರ್ಪಡೆಗೊಳಿಸುವಂತೆ ಒತ್ತಾಯಿಸಿ ಬಿಜೆಪಿ ವತಿಯಿಂದ ಸೋಮವಾರ ಹಮ್ಮಿಕೊಂಡಿದ್ದ ಜಗಳೂರು ಬಂದ್‌ನ ಪರಿಣಾಮವಾಗಿ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸಿದರು. ಅದರಲ್ಲೂ ಅನಾರೋಗ್ಯದಿಂದ ಆಸ್ಪತ್ರೆಗೆ ತೆರಳುತ್ತಿದ್ದ ವೃದ್ಧರು ಹಾಗೂ ಹಸುಗೂಸುಗಳನ್ನು ಕರೆತಂದಿದ್ದ ಪೋಷಕರು ಪರದಾಡಿದ ಘಟನೆ ಗಮನ ಸೆಳೆಯಿತು.

ಬಂದ್ ಹಿನ್ನೆಲೆಯಲ್ಲಿ ಮುಂಜಾನೆಯಿಂದಲೇ ಬಸ್‌ಗಳನ್ನು



ಪಟ್ಟಣದ ಒಳಭಾಗಕ್ಕೆ ಪ್ರವೇಶಿಸದಂತೆ ಚಳ್ಳಕೆರೆ ರಸ್ತೆಯಿಂದ ಸುಮಾರು ಎರಡು ಕಿಲೋಮೀಟರ್ ದೂರದಲ್ಲೇ ನಿಲುಗಡೆ ಮಾಡಲಾಗಿತ್ತು. ಇದರಿಂದ ಆಸ್ಪತ್ರೆ ಸೇರಿದಂತೆ ವಿವಿಧ ಅಗತ್ಯ ಸೇವೆಗಳಿಗೆ ತೆರಳಬೇಕಾದ ಸಾರ್ವಜನಿಕರು ನಡೆದು–ಕೊಂಡೇ ಪಟ್ಟಣ ಪ್ರವೇಶಿಸಬೇಕಾದ ಪರಿಸ್ಥಿತಿ ನಿರ್ಮಾಣವಾಯಿತು.

ಮಲ್ಲಾಪುರ ಗ್ರಾಮದ ವೃದ್ಧ ಬಸಪ್ಪ ಅವರು ಅನಾರೋಗ್ಯದ ಹಿನ್ನೆಲೆಯಲ್ಲಿ ಆಸ್ಪತ್ರೆಗೆ ಚಿಕಿತ್ಸೆ ಪಡೆಯಲು ಬಂದಿದ್ದರು. ಆದರೆ ಬಸ್ ಎರಡು ಕಿಲೋಮೀಟರ್ ದೂರದಲ್ಲೇ ನಿಂತಿದ್ದರಿಂದ ಅಲ್ಲಿಂದ ಆಸ್ಪತ್ರೆಗೆ ನಡೆದುಕೊಂಡು ಬರಲು ಸಾಧ್ಯವಾಗದೆ



ರಸ್ತೆಯಲ್ಲೇ ಪರದಾಡುವಂತಾಯಿತು. ಇದನ್ನು ಗಮನಿಸಿದ ವ್ಯಕ್ತಿಯೊಬ್ಬರು ಮಾನವೀಯತೆ ಮೆರೆದು ಬೈಕ್‌ನಲ್ಲಿ ಬಸಪ್ಪ ಅವರನ್ನು ಆಸ್ಪತ್ರೆಗೆ ಕರೆದೊಯ್ದರು.

ಇದೇ ವೇಳೆ ಹಸುಗೂಸನ್ನು ಚಿಕಿತ್ಸೆಗೆಂದು ಆಸ್ಪತ್ರೆಗೆ ಕರೆತಂದಿದ್ದ ಪೋಷಕರು ಕೂಡ ಬಸ್ ನಿಲುಗಡೆ ಸ್ಥಳದಿಂದ ಸುಮಾರು ಎರಡು ಕಿಲೋಮೀಟರ್ ದೂರವನ್ನು ಮಗುವಿನೊಂದಿಗೆ ನಡೆದುಕೊಂಡು ಬರುವಂತಾಯಿತು. ಕಂದಮ್ಮನನ್ನು ಎತ್ತಿ–ಕೊಂಡು ಬಿಸಿಲಿನಲ್ಲಿ ನಡೆದುಕೊಂಡು ಆಸ್ಪತ್ರೆಗೆ ಬರುತ್ತಿದ್ದ ದೃಶ್ಯ ಸಾರ್ವಜನಿಕರ ಗಮನ ಸೆಳೆಯಿತು.

ವಿದ್ಯಾರ್ಥಿನಿಲಯದ ಅಕ್ಕಿ ಡಬ್ಬಿಯಲ್ಲಿ ಹಲ್ಲಿ: ಮಕ್ಕಳ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ಆರೋಪ

“ಮುಂಜಾನೆಯ ಮೆರಗು”

ಜಗಳೂರು ಸೆ, 21– ಸಮಾಜ ಕಲ್ಯಾಣ ಇಲಾಖೆ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪಟ್ಟಣದ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯದಲ್ಲಿ ಆಹಾರ ಧಾನ್ಯಗಳ ಸಂಗ್ರಹಣೆ ಹಾಗೂ ಸ್ವಚ್ಛತೆ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ವಹಿಸಲಾಗುತ್ತಿದೆ ಎಂಬ ಗಂಭೀರ ಆರೋಪ ಕೇಳಿಬಂದಿದೆ.

ಪಟ್ಟಣದ ವೈಭವ ಹೋಟೆಲ್ ಎದುರು ಹಾಗೂ ಬಿದರಕೆರೆ ರಸ್ತೆಯ ಪಕ್ಕದಲ್ಲಿರುವ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯದಲ್ಲಿ ವಿದ್ಯಾರ್ಥಿಗಳಿಗೆ ನೀಡುವ ಅಕ್ಕಿಯನ್ನು ಸಮರ್ಪಕವಾಗಿ ಸಂಗ್ರಹಿಸದೆ ಇರುವುದರಿಂದ ಅಕ್ಕಿ ಡಬ್ಬಿಯಲ್ಲಿ ಹಲ್ಲಿಗಳು ಬಿದ್ದು ಓಡಾಡುತ್ತಿರುವುದು ಕಂಡುಬಂದಿದೆ ಎಂದು ಸಾಮಾಜಿಕ ಹೋರಾಟಗಾರ ಚಾಂದ್ ಪೀರ್ ಆರೋಪಿಸಿದ್ದಾರೆ.

ವಿದ್ಯಾರ್ಥಿನಿಲಯದಲ್ಲಿ ಅಡುಗ–ಗೆ ಬಳಸುವ ಆಹಾರ ಧಾನ್ಯಗಳನ್ನು ಸುರಕ್ಷಿತವಾಗಿ ಹಾಗೂ ಸ್ವಚ್ಛವಾಗಿ ಸಂಗ್ರಹಿಸಬೇಕಾಗಿದ್ದರೂ, ಅಕ್ಕಿ ಸಂಗ್ರಹಿಸುವ ಡಬ್ಬಿಗಳಲ್ಲೇ ಹಲ್ಲಿಗಳು ಬಿದ್ದಿರುವುದು ಆತಂಕಕಾರಿ ಸಂಗತಿಯಾಗಿದೆ. ಇಂತಹ ಅಕ್ಕಿಯನ್ನು ಬಳಸಿಕೊಂಡು ವಿದ್ಯಾರ್ಥಿಗಳಿಗೆ ಅನ್ನ ತಯಾರಿಸಿ ನೀಡಲಾಗುತ್ತಿದೆ ಎಂಬ ಆರೋಪವೂ ಕೇಳಿಬಂದಿದ್ದು, ಇದರಿಂದ ಮಕ್ಕಳ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ.

ಸ್ವಚ್ಛತೆ ಕಾಪಾಡುವಲ್ಲಿ ನಿರ್ಲಕ್ಷ್ಯ?

ವಿದ್ಯಾರ್ಥಿನಿಲಯದ ಅಡುಗೆ ಕೋಣೆ, ಆಹಾರ ಧಾನ್ಯಗಳ ಸಂಗ್ರಹಣಾ ಸ್ಥಳ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ನಿಯಮಿತವಾಗಿ ಸ್ವಚ್ಛತೆ ಕೈಗೊಳ್ಳಬೇಕಾಗಿದೆ. ಆದರೆ ಇಲ್ಲಿ ಸ್ವಚ್ಛತೆ ಹಾಗೂ ಆಹಾರ ಸುರಕ್ಷತೆಗೆ ಅಗತ್ಯವಾದ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗುತ್ತಿಲ್ಲ ಎಂಬುದು ಸ್ಥಳೀಯರ ಆರೋಪವಾಗಿದೆ.



ವಿದ್ಯಾರ್ಥಿನಿಲಯದಲ್ಲಿ ವಾಸಿಸುವ ಮಕ್ಕಳು ಪ್ರತಿನಿತ್ಯ ಅಲ್ಲಿಯೇ ತಯಾರಿಸುವ ಆಹಾರವನ್ನು ಅವಲಂಬಿಸಿರುವುದರಿಂದ ಆಹಾರದ ಗುಣಮಟ್ಟದ ಬಗ್ಗೆ ಯಾವುದೇ ರೀತಿಯ ರಾಜಿ ಮಾಡಿಕೊಳ್ಳಬಾರದು. ಧಾನ್ಯಗಳನ್ನು ಮುಚ್ಚಿದ ಪಾತ್ರೆಗಳಲ್ಲಿ ಸಂಗ್ರಹಿಸುವುದು, ಅಡುಗೆ ಕೋಣೆಯನ್ನು ಸ್ವಚ್ಛವಾಗಿಡುವುದು, ಕೀಟ ಹಾಗೂ ಸರೀಸೃಪಗಳ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳುವುದು ಸೇರಿದಂತೆ ಅಗತ್ಯ ಮುನ್ನೆಚ್ಚರಿಕೆಗಳನ್ನು ಕೈಗೊಳ್ಳಬೇಕು ಎಂದು ಚಾಂದ್ ಪೀರ್ ಒತ್ತಾಯಿಸಿದ್ದಾರೆ.

ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಲಿ

ವಿದ್ಯಾರ್ಥಿನಿಲಯಕ್ಕೆ ಸಂಬಂಧಿಸಿದಂತೆ ಕೇಳಿಬಂದಿರುವ ಆರೋಪಗಳ ಕುರಿತು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಅಕ್ಕಿ ಸೇರಿದಂತೆ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಆಹಾರ ಧಾನ್ಯಗಳ ಗುಣಮಟ್ಟವನ್ನು ಪರಿಶೀಲಿಸಿ, ಅವುಗಳನ್ನು ಸುರಕ್ಷಿತವಾಗಿ ಸಂಗ್ರಹಿಸಲಾಗುತ್ತಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಮಕ್ಕಳ ಆರೋಗ್ಯ ಮತ್ತು ಸುರಕ್ಷತೆ–ಯ ವಿಚಾರದಲ್ಲಿ ನಿರ್ಲಕ್ಷ್ಯ ಕಂಡುಬಂದಲ

ಬರ ಘೋಷಣೆ : ಸರ್ಕಾರಕ್ಕೆ ತಲೆನೋವಾದ ಶಾಸಕರ ಒತ್ತಡ

"ಮುಂಜಾನೆಯ ಮೆರಗು"

ಬೆಂಗಳೂರು, ಸೆ.21– ರಾಜ್ಯದಲ್ಲಿ ಬರ ಘೋಷಣೆ ವಿಚಾರ ಆಡಳಿತಾರೂಢ ಸರ್ಕಾರಕ್ಕೆ ತಲೆನೋವಾಗಿ ಪರಿಣಮಿಸಿದೆ. ಕೇಂದ್ರ ಸರ್ಕಾರದ ಮಾನ ದಂಡಗಳನ್ನು ಆಧರಿಸಿ ಬರಪೀಡಿತ ತಾಲ್ಲೂಕುಗಳನ್ನು ಗುರುತಿಸಲಾಗುತ್ತಿದ್ದು, ಹಲವು ತಾಲ್ಲೂಕುಗಳಲ್ಲಿ ನಿಗದಿತ ಮಾನದಂಡಗಳು ಪೂರ್ಣಗೊಳ್ಳದ ಹಿನ್ನೆಲೆಯಲ್ಲಿ ಬರ ಘೋಷಣೆ ಸಾಧ್ಯವಾಗಿಲ್ಲ.

ಆದರೆ ತಮ ಕ್ಷೇತ್ರವನ್ನು ಬರಪೀಡಿತ ತಾಲ್ಲೂಕು ಎಂದು ಘೋಷಿಸಬೇಕೆಂಬ ಒತ್ತಡವನ್ನು ಹಲವು ಶಾಸಕರು ಸರ್ಕಾರದ ಮೇಲೆ ಹೇರುತ್ತಿದ್ದಾರೆ. ವಿಶೇಷವಾಗಿ ಆಡಳಿತ ಪಕ್ಷದ ಶಾಸಕರಿಗೆ ತಮ ಕ್ಷೇತ್ರವನ್ನು ಬರಪೀಡಿತ ಎಂದು ಘೋಷಿಸಿಕೊಳ್ಳುವುದು ಪ್ರತಿಷ್ಠೆಯ ಪ್ರಶ್ನೆಯಾಗಿ ಪರಿಣಮಿಸಿದೆ.

ಇದರ ಬೆನ್ನಲ್ಲೇ ಮಾಜಿ ಸಚಿವ ಎಚ್. ಕೆ. ಪಾಟೀಲ್ ಅವರು ತಮ ಗದಗ ತಾಲೂಕನ್ನು ಅಕ್ಟೋಬರ್ 10ರೊಳಗೆ ಬರಪೀಡಿತ ಎಂದು ಘೋಷಿಸದಿದ್ದರೆ ರಾಜೀನಾಮೆ ನೀಡುವುದಾಗಿ ಎಚ್ಚರಿಕೆ ನೀಡಿದ್ದಾರೆ. ಸರ್ಕಾರದ ಮೇಲೆ ಒತ್ತಡ ತಂದು ಕೆಲವೇ ದಿನಗಳಲ್ಲಿ ಗದಗ ತಾಲ್ಲೂಕನ್ನು ಬರಪೀಡಿತ ಪ್ರದೇಶಗಳ ವ್ಯಾಪ್ತಿಗೆ ಸೇರಿಸುವುದಾಗಿ ಅವರು ಕ್ಷೇತ್ರದ ಜನರಿಗೆ ಭರವಸೆ ನೀಡಿದ್ದಾರೆ.

ಮತ್ತೊಂದೆಡೆ, ಜಗಳೂರು ತಾಲ್ಲೂಕನ್ನು ಬರಪೀಡಿತ ಎಂದು ಘೋಷಿಸದಿರುವುದನ್ನು ಖಂಡಿಸಿ ಪ್ರತಿಭಟನೆಗಳು ನಡೆದಿವೆ. ಈ ಹಿಂದೆ ಮೊಳಕಾಲೂರು ಸೇರಿದಂತೆ ಹಲವು ತಾಲ್ಲೂಕುಗಳ ಶಾಸಕರೂ ಬರ ಘೋಷಣೆ ವಿಚಾರದಲ್ಲಿ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದರು.

ಮಾನದಂಡಗಳೇ ಸರ್ಕಾರಕ್ಕೆ ಸವಾಲು:

ಕೇಂದ್ರದ ಬರ ಮಾನದಂಡಗಳ ಪ್ರಕಾರ ನಿರ್ದಿಷ್ಟ ಅವಧಿಯಲ್ಲಿ ನಿರಂತರ ಒಣಹವೆ, ಮಳೆಯ ಕೊರತೆ, ತೇವಾಂಶದ ಪ್ರಮಾಣ ಸೇರಿದಂತೆ ಹಲವು ಅಂಶಗಳನ್ನು ಪರಿಗಣಿಸಲಾಗುತ್ತದೆ. ಕೆಲವು ತಾಲ್ಲೂಕುಗಳಲ್ಲಿ ಈ ಮಾನದಂಡಗಳು ಪೂರ್ಣ ಪ್ರಮಾಣದಲ್ಲಿ ಈಡೇರದ ಹಿನ್ನೆಲೆಯಲ್ಲಿ ಬರಪೀಡಿತ ತಾಲ್ಲೂಕುಗಳ ಪಟ್ಟಿಗೆ ಸೇರಿಸಲು ಸಾಧ್ಯವಾಗಿಲ್ಲ.



ಶಾಸಕರಿಗೆ ಕೇಂದ್ರದ ನಿಯಮಾವಳಿಗಳು ಹಾಗೂ ರಾಜ್ಯ ಸರ್ಕಾರ ನಡೆಸಿರುವ ಸಮೀಕ್ಷೆಯ ಫಲಿತಾಂಶದ ಅರಿವಿದ್ದರೂ, ರಾಜಕೀಯ ಒತ್ತಡದಿಂದ ತಮ ಕ್ಷೇತ್ರಗಳನ್ನು ಬರಪೀಡಿತ ಎಂದು ಘೋಷಿಸುವಂತೆ ಒತ್ತಾಯಿಸುತ್ತಿದ್ದಾರೆ ಎಂಬ ಮಾತುಗಳು ಕೇಳಿಬರುತ್ತಿವೆ.

ಕೇಂದ್ರದ ನೆರವಿನ ಮೇಲೂ ಪರಿಣಾಮದ ಆತಂಕ:

ನಿಗದಿತ ಮಾನದಂಡಗಳನ್ನು ಮೀರಿ ರಾಜಕೀಯ ಒತ್ತಡಕ್ಕೆ ಮಣಿದು ಬರ ಘೋಷಣೆ ಮಾಡಿದರೆ, ಮುಂದಿನ ಹಂತದಲ್ಲಿ ಕೇಂದ್ರದ ಅಧ್ಯಯನ ತಂಡ ರಾಜ್ಯಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಪರಿಶೀಲನೆ ನಡೆಯಲಿದೆ. ತಪ್ಪು ಮಾಹಿತಿ ಆಧರಿಸಿ ಬರ ಘೋಷಣೆ ಮಾಡಲಾಗಿದೆ ಎಂಬ ಅನುಮಾನ ಮೂಡಿದರೆ ಕೇಂದ್ರದಿಂದ ದೊರೆಯಬೇಕಾದ ಆರ್ಥಿಕ ನೆರವು ವಿಳಂಬವಾಗುವ ಆತಂಕ ರಾಜ್ಯ ಸರ್ಕಾರಕ್ಕಿದೆ.

ಪ್ರತಿಯೊಂದು ಬರಪೀಡಿತ ತಾಲ್ಲೂಕಿನ ಘೋಷಣೆಯನ್ನೂ ಕೇಂದ್ರ ಸರ್ಕಾರ ಪರಿಶೀಲನೆಗೆ ಒಳಪಡಿಸುವ ಸಾಧ್ಯತೆ ಇರುವುದರಿಂದ ರಾಜ್ಯ ಸರ್ಕಾರ ಕಟ್ಟುನಿಟ್ಟಿನ ಮಾನದಂಡಗಳನ್ನು ಪಾಲಿಸುತ್ತಿದೆ. ಯಾವುದೇ ಹಂತದಲ್ಲಿ ಲೋಪ ಕಂಡುಬಂದು ಕೇಂದ್ರದ ನೆರವು ವಿಳಂಬವಾದರೆ ಬರ ಪರಿಹಾರ ಮತ್ತು ಪುನರ್ವಸತಿ ಕಾರ್ಯಗಳ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ.

ವಿಶೇಷ ಅಧಿವೇಶನದಲ್ಲಿ ಆಡಳಿತ ಪಕ್ಷದ ಶಾಸಕರಿಂದಲೇ ಒತ್ತಡ?:

ವಿಶೇಷವಾಗಿ ಸಚಿವ ಸಂಪುಟ ವಿಸ್ತರಣೆಯಲ್ಲಿ ಅವಕಾಶ ವಂಚಿತರಾದ ಶಾಸಕರು ಬರ ಘೋಷಣೆ ವಿಚಾರದಲ್ಲಿ ಬಿಗಿಪಟ್ಟು ಹಿಡಿದಿದ್ದಾರೆ ಎಂಬ ಮಾತುಗಳು ರಾಜಕೀಯ ವಲಯದಲ್ಲಿ ಕೇಳಿಬರುತ್ತಿವೆ.

ಇಂದಿನಿಂದ ಆರಂಭವಾಗಿರುವ ವಿಧಾನಮಂಡಲದ ವಿಶೇಷ ಅಧಿವೇಶನದಲ್ಲೂ ಬರ ಘೋಷಣೆ ವಿಚಾರ ಪ್ರಮುಖ ಚರ್ಚೆಯ ವಿಷಯವಾಗುವ ಸಾಧ್ಯತೆ ಇದೆ. ವಿರೋಧ ಪಕ್ಷದ ಶಾಸಕರಿಗಿಂತ ಆಡಳಿತ ಪಕ್ಷದ ಶಾಸಕರಿಂದಲೇ ಸರ್ಕಾರದ ಮೇಲೆ ಹೆಚ್ಚಿನ ಒತ್ತಡ ವ್ಯಕ್ತವಾಗುವ ಸಾಧ್ಯತೆ ಇದೆ.

ಸಂಬಂಧಿ ಯುವಕನೊಂದಿಗೆ ವಿವಾಹ ಮಾಡಿಸಲು ಯುವತಿಯ ಅಪಹರಣ ಯತ್ನ.!

"ಮುಂಜಾನೆಯ ಮೆರಗು"

ಬೆಂಗಳೂರು, ಸೆ. 21– ಹೈದರಾಬಾದ್‌ಗೆ ಕರೆದೊಯ್ದು ಸಂಬಂಧಿ ಯುವಕನೊಂದಿಗೆ ವಿವಾಹ ಮಾಡಿಸುವ ದುರುದ್ದೇಶದಿಂದ ಸಿನಿಮೀಯ ರೀತಿಯಲ್ಲಿ ವಿವಾಹಿತ ಯುವತಿಯನ್ನು ಅಪಹರಿಸಲು ಯತ್ನಿಸಿರುವುದು ಮಾಗಡಿ ರಸ್ತೆ ಠಾಣೆ ಪೊಲೀಸರ ತನಿಖೆಯಿಂದ ಗೊತ್ತಾಗಿದೆ. ರಾಜಸ್ಥಾನ ಮೂಲದ ಪೂಜಾ (21) ತನ್ನ ಜಾತಿಯವರೇ ಆದ ಓಂಪ್ರಕಾಶ್ ಎಂಬಾತನನ್ನು ಪ್ರೀತಿಸಿದ್ದರು. ಆದರೆ ಆತನದು ಬೇರೆ ಉಪಜಾತಿಯಾಗಿದ್ದರಿಂದ ಪೋಷಕರು ಇವರ ಮದುವೆಗೆ ಒಪ್ಪಿರಲಿಲ್ಲ.

ಪೋಷಕರ ವಿರೋಧದ ನಡುವೆಯೂ ಏಳು ತಿಂಗಳ ಹಿಂದೆ ಮದುವೆಯಾಗಿದ್ದ ಪೂಜಾ, ನಂತರ ರಾಜಸ್ಥಾನ ತೊರೆದು ಬೆಂಗಳೂರಿಗೆ ಬಂದಿದ್ದರು. ದಾಸರಹಳ್ಳಿಯ ಬಾಡಿಗೆ ಮನೆಯಲ್ಲಿ ದಂಪತಿ ವಾಸವಾಗಿದ್ದರು.ಪೂಜಾಳ ಪ್ರೇಮ ವಿವಾಹವನ್ನು ಕುಟುಂಬಸ್ಥರು ಹಾಗೂ ಸಂಬಂಧಿಕರು ಒಪ್ಪಿರಲಿಲ್ಲ. ಹೇಗಾದರೂ ಮಾಡಿ ಅವರಿಬ್ಬರನ್ನು ದೂರಮಾಡಿ ಮಗಳನ್ನು ವಾಪಸ್ ರಾಜಸ್ಥಾನಕ್ಕೆ ಕರೆದೊಯ್ಯಬೇಕೆಂದು ಕುಟುಂಬಸ್ಥರು ಯೋಚಿಸಿದ್ದರು.



ನಂತರ ಸಂಬಂಧಿ ಕನ್ನಯ್ಯಲಾಲ್ ಜೊತೆ ಹೈದರಾಬಾದ್‌ನಲ್ಲಿ ಪೂಜಾಳಿಗೆ ಮದುವೆ ಮಾಡಿಸುವ ಯೋಚನೆ ಮಾಡಿದ್ದಾರೆ. ಹಾಗಾಗಿ ಬೆಂಗಳೂರಿನಲ್ಲಿ ಪೂಜಾ ವಾಸವಿರುವ ಸ್ಥಳವನ್ನು ಪತ್ತೆಹಚ್ಚಿ ಆಕೆಯನ್ನು ಕರೆದೊಯ್ಯಲು ಕನ್ನಯ್ಯಲಾಲ್ ಮಾಸ್ಟರ್ ಪ್ಲಾನ್ ಮಾಡಿದ್ದಾನೆ.

ಅದರಂತೆ ನಾಲ್ವರಿಗೆ ಸುಪಾರಿ ನೀಡಿ ರಾಜಸ್ಥಾನದಿಂದ ಬೆಂಗಳೂರಿಗೆ ಕಳುಹಿಸಿದ್ದನು. ಅವರೆಲ್ಲರೂ ಕಾರಿನಲ್ಲಿ ನಗರಕ್ಕೆ ಬಂದು ಲಾಡ್ಜ್‌ವೊಂದರಲ್ಲಿ ಉಳಿದುಕೊಂಡು ಪೂಜಾ ವಾಸವಿದ್ದ ಸ್ಥಳವನ್ನು ಹುಡುಕಿದ್ದಾರೆ.ಒಂದು ವಾರದ ಹಿಂದೆ ಪೂಜಾ ವಾಸವಾಗಿದ್ದ ದಾಸರಹಳ್ಳಿ ಮನೆಗೆ ನುಗ್ಗಿದ ನಾಲ್ವರು, ಆಕೆಯನ್ನು ಬಲವಂತವಾಗಿ ಮನೆಯಿಂದ ಹೊರಗೆ ಕರೆತಂದು ಕಾರಿನಲ್ಲಿ ಅಪಹರಿಸಿಕೊಂಡು ಹೋಗುತ್ತಿದ್ದರು.

ಸಹಾಯಕ್ಕಾಗಿ ಆಕೆ ಕೂಗಿಕೊಂಡಾಗ ಸ್ಥಳೀಯರು ಕಾರನ್ನು ಅಡ್ಡಗಟ್ಟಲು ಯತ್ನಿಸಿದ್ದಾರೆ. ಈ ವೇಳೆ ಚಾಲಕ ಸದ್ದಾಂ ಎಂಬಾತ ಕಾರನ್ನು ಅಡ್ಡಾದಿಡ್ಡಿಯಾಗಿ ಚಲಾಯಿಸಿಕೊಂಡು ಹೋಗಿದ್ದು, ರಸ್ತೆಯುದ್ದಕ್ಕೂ ಸರಣಿ ಅಪಘಾತ ಸಂಭವಿಸಿದೆ. ಹಲವು ವಾಹನಗಳು ಜಖಂಗೊಂಡಿದ್ದಲ್ಲದೆ, ಇಬ್ಬರು ಮಕ್ಕಳು ಸೇರಿದಂತೆ ಒಟ್ಟು ಆರು ಮಂದಿ ಗಾಯಗೊಂಡಿದ್ದರು.

ಕೊನೆಗೆ ಸಾರ್ವಜನಿಕರ ಸಮಯಪ್ರಜ್ಞೆಯಿಂದ ಕಾರನ್ನು ಅಡ್ಡಗಟ್ಟಿ ಯುವತಿಯನ್ನು ರಕ್ಷಿಸಿದ್ದಾರೆ. ಈ ವೇಳೆ ಕಾರು ಚಾಲಕ ಸದ್ದಾಂ ಪರಾರಿಯಾಗಿದ್ದಾನೆ. ಗಂಭೀರವಾಗಿ ಗಾಯಗೊಂಡಿದ್ದ ಜಯಲಕ್ಷ್ಮೀ (57) ಎಂಬ ಮಹಿಳೆ ಇನ್ನೂ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಮಾಗಡಿ ರಸ್ತೆ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು, ರಾಜಸ್ಥಾನ ಮೂಲದ ಕಿರಣ್ ಆಯನ್ ಹಾಗೂ ರಾಜೇಶ್‌ನನ್ನು ಬಂಧಿಸಿ ತನಿಖೆ ಮುಂದುವರಿಸಿದ್ದರು. ತನಿಖೆಯಲ್ಲಿ ಇನ್ನಷ್ಟು ಮಾಹಿತಿಗಳು ಬಹಿರಂಗವಾಗಿವೆ.ಇದರನ್ವಯ ಪೂಜಾಳ ಚಿಕ್ಕಪ್ಪ ಅಂದಾರಾವ್, ಹೈದರಾಬಾದ್‌ನಲ್ಲಿ ನೆಲೆಸಿದ್ದ ಸಂಬಂಧಿ ಕನ್ನಯ್ಯಲಾಲ್ ಹಾಗೂ ಸೋದರತ್ತೆ ಪ್ರಾಣಿದೇವಿಯನ್ನು ಬಂಧಿಸಿದ್ದಾರೆ. ಬಂಧಿತರ ಸಂಖ್ಯೆ ಆರಕ್ಕೆ ಏರಿಕೆಯಾಗಿದೆ. ಅಂದಿನಿಂದ ತಲೆಮರೆಸಿಕೊಂಡಿರುವ ಕಾರು ಚಾಲಕ ಸದ್ದಾಂ ಇದುವರೆಗೂ ಪತ್ತೆಯಾಗಿಲ್ಲ. ಆತನ ಪತ್ತೆಗಾಗಿ ಶೋಧ ಕಾರ್ಯ ಮುಂದುವರಿದಿದೆ.

ಮಹಿಳಾ ಸುರಕ್ಷತೆಗೆ ಕ್ಯಾಬ್‌ಗಳಲ್ಲಿ ಅಳವಡಿಸಿರುವ ಪ್ಯಾನಿಕ್ ಬಟನ್ ವರ್ಕ್ ಆಗುತ್ತಿಲ್ವಂತೆ

"ಮುಂಜಾನೆಯ ಮೆರಗು"

ಬೆಂಗಳೂರು, ಸೆ. 21– ಮಹಿಳೆಯರು ಹಾಗೂ ಪ್ರಯಾಣಿಕರ ಸುರಕ್ಷತೆಯ ದೃಷ್ಟಿಯಿಂದ ಯೆಲ್ಲೋ ಬೋರ್ಡ್ ಕ್ಯಾಬ್‌ಗಳಲ್ಲಿ ಕಡ್ಡಾಯಗೊಳಿಸಿರುವ ಪ್ಯಾನಿಕ್ ಬಟನ್‌ಗಳು ಹೆಸರಿಗೆ ಮಾತ್ರ ಅಳವಡಿಕೆಯಾಗಿದ್ದು, ತುರ್ತು ಸಂದರ್ಭದಲ್ಲಿ ಕಾರ್ಯನಿರ್ವಹಿಸುತ್ತಿಲ್ಲ ಎಂಬ ಆರೋಪಗಳು ಕೇಳಿಬಂದಿವೆ.



ಪ್ರಯಾಣಿಕರ ಸುರಕ್ಷತೆಗಾಗಿ ಸಾರಿಗೆ ಇಲಾಖೆ ನಿರ್ಭಯ ಯೋಜನೆಯಡಿಯೆಲ್ಲೋ ಬೋರ್ಡ್ ಕ್ಯಾಬ್‌ಗಳಲ್ಲಿ ಪ್ಯಾನಿಕ್ ಬಟನ್ ಅಳವಡಿಕೆಯನ್ನು ಕಡ್ಡಾಯಗೊಳಿಸಿತ್ತು. ಬಟನ್ ಅಳವಡಿಸದ ವಾಹನಗಳಿಗೆ ಫಿಟ್‌ನೆಸ್ ಸರ್ಟಿಫಿಕೇಟ್ (ಎಫ್‌ಸಿ) ನೀಡುವುದಿಲ್ಲ ಎಂಬ ಸೂಚನೆಯ ಹಿನ್ನೆಲೆಯಲ್ಲಿ ಚಾಲಕರು ಸಾವಿರಾರು ರೂಪಾಯಿ ಖರ್ಚು ಮಾಡಿ ಬಟನ್ ಅಳವಡಿಸಿಕೊಂಡಿದ್ದಾರೆ.

ಆದರೆ, ಬಟನ್ ಅಳವಡಿಸಿ ಹಲವು ತಿಂಗಳು ಕಳೆದರೂ ಅದು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂಬುದು ಚಾಲಕರ ಅಳಲು. ನಗರದ ಹಲವು ಯೆಲ್ಲೋ ಬೋರ್ಡ್ ಕ್ಯಾಬ್‌ಗಳಲ್ಲಿ ಮೂರು ಪ್ಯಾನಿಕ್ ಬಟನ್‌ಗಳನ್ನು ಅಳವಡಿಸಲಾಗಿದೆ. ಪ್ರತಿ ವಾಹನಕ್ಕೆ ಸುಮಾರು 15 ಸಾವಿರದಿಂದ 18 ಸಾವಿರ ರೂಪಾಯಿವರೆಗೆ ಖರ್ಚಾಗಿದೆ ಎನ್ನಲಾಗಿದೆ.

ತುರ್ತು ಸಂದರ್ಭದಲ್ಲಿ ಚಾಲಕ ಅಥವಾ ಪ್ರಯಾಣಿಕರು ಬಟನ್ ಒತ್ತಿದ ತಕ್ಷಣ ಸಂಬಂಧಿಸಿದ ವ್ಯವಸ್ಥೆಗೆ ಸಿಗ್ನಲ್ ಹೋಗಬೇಕು. ವಾಹನದ ಜಿಪಿಎಸ್ ಸ್ಥಳ ಮಾಹಿತಿ ಲಭ್ಯವಾಗಬೇಕು ಹಾಗೂ ಅಗತ್ಯವಿದ್ದಲ್ಲಿ ಪೊಲೀಸ್ ಸಿಬ್ಬಂದಿ ಕೂಡಲೇ ಸಂಪರ್ಕಿಸಿ ಸ್ಥಳಕ್ಕೆ ಧಾವಿಸಬೇಕು ಎಂಬುದು ಇದರ ಉದ್ದೇಶ.

ಆದರೆ, ಬಟನ್ ಒತ್ತಿದರೂ ಯಾವುದೇ ಪ್ರತಿಕ್ರಿಯೆ ಬರುತ್ತಿಲ್ಲ ಎಂಬ ಆರೋಪಗಳು ಕೇಳಿಬರುತ್ತಿವೆ. ಒಂದು ಬಾರಿ ಮಾತ್ರವಲ್ಲ, ಹಲವು ಬಾರಿ ಪ್ಯಾನಿಕ್ ಬಟನ್ ಒತ್ತಿದರೂ ಕರೆ ಬರುವುದಿಲ್ಲ, ಸಂದೇಶವೂ ಬರುವುದಿಲ್ಲ ಎಂದು ಕೆಲ ಪ್ರಯಾಣಿಕರು ಹಾಗೂ ಚಾಲಕರು ದೂರಿದ್ದಾರೆ.

ಕ್ಯಾಬ್ ಪ್ರಯಾಣದ ವೇಳೆ ಪ್ರಯಾಣಿಕರು ಮತ್ತು ಚಾಲಕರ ನಡುವೆ ಕೆಲವೊಮ್ಮೆ ಗಲಾಟೆ, ವಾಗ್ವಾದ ಸೇರಿದಂತೆ ವಿವಿಧ ಸಮಸ್ಯೆಗಳು ಎದುರಾಗುತ್ತವೆ. ಇಂತಹ ಸಂದರ್ಭದಲ್ಲಿ ಪರಿಸ್ಥಿತಿ ವಿಕೋಪಕ್ಕೆ ತಿರುಗುವ ಮುನ್ನ ಪೊಲೀಸ್ ನೆರವು ಪಡೆಯಲು ಪ್ಯಾನಿಕ್ ಬಟನ್ ಸಹಕಾರಿಯಾಗಬೇಕಿತ್ತು. ಆದರೆ, ತುರ್ತು ಸಮಯದಲ್ಲೇ ಬಟನ್ ಕೆಲಸ ಮಾಡದಿದ್ದರೆ ಅದರ ಉದ್ದೇಶವೇನು ಎಂಬ ಪ್ರಶ್ನೆ ಉದ್ಭವಿಸಿದೆ.

ಮಹಿಳಾ ಪ್ರಯಾಣಿಕರ ಸುರಕ್ಷತೆಯ ವಿಚಾರದಲ್ಲೂ ಇದು ಪ್ರಮುಖವಾಗಿದ್ದು, ರಾತ್ರಿ ವೇಳೆ ಅಥವಾ ನಿರ್ಜನ ಪ್ರದೇಶಗಳಲ್ಲಿ ತುರ್ತು ಪರಿಸ್ಥಿತಿ ಎದುರಾದಾಗ ತಕ್ಷಣ ಸಹಾಯ ಪಡೆಯಲು ಸಾಧ್ಯವಾಗದಿದ್ದರೆ ಸುರಕ್ಷತಾ ವ್ಯವಸ್ಥೆಯ ಮೇಲೆಯೇ ಪ್ರಶ್ನೆ ಮೂಡುತ್ತದೆ ಎಂದು ಪ್ರಯಾಣಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಕಸ್ತೂರಿರಂಗನ್ ವರದಿ ಕುರಿತು ವಿಶೇಷ ಅಧಿವೇಶನದಲ್ಲಿ ಗದ್ದಲ, ಮಾತಿನ ಚಕಮಕಿ

"ಮುಂಜಾನೆಯ ಮೆರಗು"

ಬೆಂಗಳೂರು, ಸೆ.21– ಪಶ್ಚಿಮಘಟ್ಟಗಳ ಕಸ್ತೂರಿರಂಗನ್ ಸಮಿತಿ ವರದಿ ಹಾಗೂ ಬರ ಪರಿಸ್ಥಿತಿ ಕುರಿತು ಚರ್ಚಿಸಲು ಆರಂಭವಾದ ವಿಧಾನಮಂಡಲದ ಮೂರು ದಿನಗಳ ವಿಶೇಷ ಅಧಿವೇಶನದ ಮೊದಲ ದಿನವೇ ಆಡಳಿತಾರೂಢ ಕಾಂಗ್ರೆಸ್ ಹಾಗೂ ಪ್ರತಿಪಕ್ಷಗಳ ನಡುವೆ ಮಾತಿನ ಚಕಮಕಿ ಮತ್ತು ಪ್ರತಿಭಟನೆಗೆ ವೇದಿಕೆಯಾಯಿತು.

ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರು ಕಸ್ತೂರಿರಂಗನ್ ವರದಿ ವಿಚಾರವನ್ನು ಪ್ರಸ್ತಾಪಿಸಿದ ಬಳಿಕವೂ ಪ್ರತಿಪಕ್ಷ ಸದಸ್ಯರ ಪ್ರತಿಭಟನೆ ಮುಂದುವರಿದ ಹಿನ್ನೆಲೆಯಲ್ಲಿ ಸಭಾಪತಿ ಕಲಾಪವನ್ನು 10 ನಿಮಿಷ ಮುಂದೂಡಿದರು.

ಕಸ್ತೂರಿರಂಗನ್ ವರದಿಯನ್ನು ಒಪ್ಪುವುದಿಲ್ಲ ಎಂಬ ನಿಲುವನ್ನು ರಾಜ್ಯ ಸರ್ಕಾರ ಈಗಾಗಲೇ ಹಲವು ಬಾರಿ ಕೇಂದ್ರ ಸರ್ಕಾರಕ್ಕೆ ಪತ್ರಗಳ ಮೂಲಕ ತಿಳಿಸಿದೆ.. ಕೇಂದ್ರ ಸರ್ಕಾರ ಪದೇಪದೇ ಅಧಿಸೂಚನೆಗಳನ್ನು ಹೊರಡಿಸುತ್ತಿದ್ದು, ಇದೀಗ ಹೊರಡಿಸಿರುವ ಕರಡು ಅಧಿಸೂಚನೆಗೂ ರಾಜ್ಯ ಸರ್ಕಾರದ ವಿರೋಧವಿದೆ ಎಂದು ಸ್ಪಷ್ಟಪಡಿಸಿದರು.

ಈ ಕಾರಣಕ್ಕಾಗಿಯೇ ವಿಶೇಷ ಅಧಿವೇಶನದಲ್ಲಿ ವಿಚಾರವನ್ನು ಚರ್ಚೆಗೆ ತಂದಿದ್ದೇವೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಈಗಾಗಲೇ ರೈತರು, ಸ್ಥಳೀಯ ಜನರು ಹಾಗೂ ಜನಪ್ರತಿನಿಧಿಗಳ ಅಭಿಪ್ರಾಯಗಳನ್ನು ಸಂಗ್ರಹಿಸಿರುವುದರಿಂದ, ಆ ಎಲ್ಲ ಅಭಿಪ್ರಾಯಗಳನ್ನೂ ಸದನದಲ್ಲಿ ಸಮಗ್ರವಾಗಿ ಚರ್ಚಿಸಬೇಕಾಗಿದೆ ಎಂದು ಪರಮೇಶ್ವರ್ ಹೇಳಿದರು. ವಿಶೇಷ ಅಧಿವೇಶನದಲ್ಲಿ ವರದಿ ಕುರಿತು ಸಮಗ್ರ ಚರ್ಚೆ ನಡೆಸುವ ಉದ್ದೇಶವಿದೆ ಎಂದು ಅವರು ಈ ಹಿಂದೆ ಕೂಡ ಹೇಳಿದ್ದರು ಎಂದರು.

ಈ ವೇಳೆ, ಪರಮೇಶ್ವರ್ ಅವರು ಪ್ರತಿಪಕ್ಷಗಳ ನಿಲುವನ್ನೇ ಪ್ರಶ್ನಿಸಿ, ವಿಪಕ್ಷಗಳು ಕಸ್ತೂರಿರಂಗನ್ ವರದಿಯ ಪರವೋ ಅಥವಾ ವಿರೋಧವೋ ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು. ಪ್ರತಿಪಕ್ಷಗಳು ತಮ ನಿಲುವನ್ನು ಹೇಳದಿದ್ದರೆ, ಜನರಿಗೆ ಅವರು ವರದಿಯ ಪರವಾಗಿದ್ದಾರೆ ಎಂಬ ಸಂದೇಶ ಹೋಗಬೇಕಾಗುತ್ತದೆ ಎಂದು ಅವರು ಹೇಳಿದರು. ಈ ಹೇಳಿಕೆ ಸದನದಲ್ಲಿ ಮತ್ತಷ್ಟು ರಾಜಕೀಯ ಬಿಸಿ ಏರಲು ಕಾರಣವಾಯಿತು.



ವಿಪಕ್ಷದಿಂದ ತೀವ್ರ ಆಕ್ಷೇಪ


ಪರಮೇಶ್ವರ್ ಅವರ ಪ್ರಸ್ತಾಪದ ನಡುವೆಯೇ ವಿಪಕ್ಷ ಸದಸ್ಯರು ಕಸ್ತೂರಿರಂಗನ್ ವರದಿಗೆ ತಮ ವಿರೋಧವನ್ನು ವ್ಯಕ್ತಪಡಿಸಿದರು. ಆಡಳಿತ ಪಕ್ಷ ಮತ್ತು ವಿಪಕ್ಷ ಸದಸ್ಯರ ನಡುವೆ ವಾಕ್ಸಮರವೂ ನಡೆಯಿತು.

ಬಿಜೆಪಿ ನಾಯಕ ಸಿ.ಟಿ. ರವಿ ಅವರು ಕಸ್ತೂರಿರಂಗನ್ ವರದಿ ಹಾಗೂ ಅದರ ಹಿನ್ನೆಲೆಯ ಕುರಿತು ಕಾಂಗ್ರೆಸ್ ವಿರುದ್ಧ ಟೀಕಾತಕ ಹೇಳಿಕೆ ನೀಡಿದರು. ವರದಿಯ ವಿಚಾರದಲ್ಲಿ ಕಾಂಗ್ರೆಸ್ಸನ ನಿಲುವನ್ನು ಪ್ರಶ್ನಿಸಿದ ಅವರು, ಈ ಕುರಿತು ವಿಷಾದ ವ್ಯಕ್ತಪಡಿಸಬೇಕು ಎಂಬ ಅಭಿಪ್ರಾಯವನ್ನು ಪ್ರತಿಪಕ್ಷದ ನಾಯಕ ಚಲವಾದಿ ನಾರಾಯಣಸ್ವಾಮಿ ವ್ಯಕ್ತಪಡಿಸಿದರು. ಇದರ ನಡುವೆ ಸದನದಲ್ಲಿ ಘೋಷಣೆಗಳು ಮುಂದುವರಿದಿದ್ದರಿಂದ ಕಲಾಪದ ಸಹಜ ಪ್ರಕ್ರಿಯೆಗೆ ಅಡ್ಡಿಯಾಯಿತು.

ಜಗಳೂರು ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಲು ಆಗ್ರಹ

"ಮುಂಜಾನೆಯ ಮೆರಗು"

ಜಗಳೂರು ಸೆ, 21– ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ, ಬರದಿಂದ ಸಂಕಷ್ಟಕ್ಕೀಡಾಗಿರುವ ರೈತರಿಗೆ ಸೂಕ್ತ ಪರಿಹಾರ ಹಾಗೂ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು ಎಂದು ಒತ್ತಾಯಿಸಿ ಭಾರತೀಯ ಕಿಸಾನ್ ಸಂಘದ ತಾಲೂಕು ಘಟಕದ ವತಿಯಿಂದ ಸೋಮವಾರ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಲಾಯಿತು.



ಪಟ್ಟಣದಲ್ಲಿ ನಡೆದ ಬಂದ್ ಪ್ರಕ್ರಿಯೆಯಲ್ಲಿ ಭಾಗವಹಿಸಿದ ಬಳಿಕ ಭಾರತೀಯ ಕಿಸಾನ್ ಸಂಘದ ಪದಾಧಿಕಾರಿಗಳು ಹಾಗೂ ರೈತರು ತಾಲೂಕು ಕಚೇರಿ

ಕಸ್ತೂರಿ ರಂಗನ್ ವರದಿ ಒಪ್ಪಲ್ಲ, ಭೂಮಿ ಬಿಟ್ಟುಕೊಡುವ ಮಾತೇ ಇಲ್ಲ : ಸಿಎಂ



"ಮುಂಜಾನೆಯ ಮೆರಗು"

ಬೆಂಗಳೂರು,ಸೆ.21– ರಾಜಕಾರಣವನ್ನು ಬದಿಗಿಟ್ಟು ರೈತರ ಹಿತಕಾಪಾಡಲು ಕಸ್ತೂರಿ ರಂಗನ್ ನೇತೃತ್ವದ ಉನ್ನತ ಮಟ್ಟದ ಕಾರ್ಯನಿರತ ತಂಡ ನೀಡಿರುವ ವರದಿಯ ಬಗ್ಗೆ ವಿಶೇಷ ಚರ್ಚೆ ಮಾಡೋಣ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿಧಾನಸಭೆಯಲ್ಲಿಂದು ತಿಳಿಸಿದರು.

ವಿಶೇಷ ಚರ್ಚೆ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದ ಮುಖ್ಯಮಂತ್ರಿ , ಪ್ರತಿಯೊಬ್ಬ ರೈತರ ರಕ್ಷಣೆ ಮಾಡಬೇಕೆಂಬುದು ನನ್ನ ಬದ್ಧತೆ ಯಾಗಿದೆ. ಕೇವಲ ಅರಣ್ಯದಂಚಿನಲ್ಲಿರುವ ರೈತರ ಪರಿಸ್ಥಿತಿ ಅಷ್ಟೇ ಅಲ್ಲ ನಾಡಿನ ರೈತರ ಹಿತ ಕಾಪಾಡಬೇಕಿದೆ. ಕೇಂದ್ರಕ್ಕೆ ರಾಜ್ಯದ ನಿಲುವುದನ್ನು ತಿಳಿಸಬೇಕಾಗಿರುವುದರಿಂದ ಈ ವಿಶೇಷ ಚರ್ಚೆಯನ್ನು ನಡೆಸಬೇಕಿದೆ ಎಂದರು.

ಕಳೆದ ಅಧಿವೇಶನದಲ್ಲಿ 10 ದಿನಗಳ ಸಮಯವಿದ್ದರೂ ಪ್ರತಿಪಕ್ಷಗಳು ಬಳಸಿಕೊಳ್ಳಲಿಲ್ಲ. ಕಸ್ತೂರಿ ರಂಗನ್ ವರದಿ, ಬರಗಾಲ, ರೈತರ ಸಮಸ್ಯೆಗಳ ಬಗ್ಗೆ ಚರ್ಚಿಸಲು ಅಧಿವೇಶನವನ್ನು ಕರೆಯಲಾಗಿದೆ. ಹುಟ್ಟಿದಾಗ ಭೂಮಿಗೆ ಬರುತ್ತೇವೆ. ಸತ್ತಾಗಲೂ ಭೂಮಿಗೆ ಹೋಗುತ್ತೇವೆ. ಹೀಗಾಗಿ ಭೂಮಿ ಬಿಟ್ಟುಕೊಡುವ ಮಾತೇ ಇಲ್ಲ ಎಂದರು.

ಕಸ್ತೂರಿ ರಂಗನ್ ವರದಿ ಹಿನ್ನೆಲೆಯಲ್ಲಿ ಪಶ್ಚಿಮ ಘಟ್ಟ ಪ್ರದೇಶದಲ್ಲಿ ಜನಾಕ್ರೋಶವಿದೆ. ಆ ಭಾಗದ ಜನರ ಸಮಸ್ಯೆಯನ್ನು ಆಲಿಸಿದ್ದೇನೆ. ಸಾವಿರಾರು ಅರ್ಜಿಗಳು ಬಂದಿವೆ. ಅನೇಕ ಸಲಹೆಗಳನ್ನು ನೀಡಿ–ದ್ದಾರೆ. ಪಶ್ಚಿಮ ಘಟ್ಟದ ಬಡ ಜನರ ಹಿತವನ್ನು ಕಾಪಾಡಬೇಕಾಗಿದೆ ಎಂದು ತಿಳಿಸಿದರು. ಪಶ್ಚಿಮ ಘಟ್ಟ ಪ್ರದೇಶದಲ್ಲಿ ಆರು ನದಿಗಳು ಹುಟ್ಟುತ್ತವೆ. 10 ಜಿಲ್ಲೆಯ ಜನರ ಬದುಕಿಗೆ ಕಸ್ತೂರಿ ರಂಗನ್ ವರದಿಯಿಂದ ಮಾರಕವಾಗಲಿದೆ ಎಂಬ ಭಯದ ವಾತಾವರಣ ಉಂಟಾಗಿದೆ.

19, 252 ಲಕ್ಷ ಚದರ ಕಿ.ಮೀ ವ್ಯಾಪ್ತಿಯಲ್ಲಿದೆ. 960 ಕಿ.ಮೀ ಜಾಗವನ್ನು ಪರಿಸರ ಸೂಕ್ಷ್ಮ ವಲಯಕ್ಕೆ ಸೇರಿಸಲಾಗಿದೆ. ಹೀಗಾಗಿ ವರದಿಯನ್ನು ತಿರಸ್ಕರಿಸಬೇಕೆಂಬ ಒತ್ತಾಯ ತೀವ್ರವಾಗಿದೆ ಎಂದರು.

ಉನ್ನತ ಮಟ್ಟದ ತಾಂತ್ರಿಕ ಸಮಿತಿ ರಚಿಸಬೇಕು. ಕೇರಳ ಮಾದರಿ ಇರಬೇಕು. ಪರಿಸರ ಸೂಕ್ಷ್ಮವಲಯ ತೆಗೆಯಬೇಕು, ಬಫರ್ ಜೋನ್ ವಲಯ ಕಾಡಿನ ಗಡಿಯೊಳಗಿರಬೇಕು. ಕಸ್ತೂರಿ ರಂಗನ್ ವರದಿ ತಿರಸ್ಕರಿಸಿ ಎಂಬ ಒತ್ತಾಯ ಬಂದಿವೆ. ನಮ ಆಸ್ತಿ ನಮ ಬದುಕಿಗೆ ತೊಂದರೆ ಬೇಡ ಎಂಬ ಅಭಿಪ್ರಾಯ ವ್ಯಕ್ತವಾಗಿದೆ. ಈ ವರದಿಯಿಂದಾಗಿ ಬಗರ್‌ಹುಕುಂ ಅರ್ಜಿಗಳು ಹಾಗೂ ಅಕ್ರಮ ಸಕ್ರಮ ಅನುಷ್ಠಾನಕ್ಕೂ ತೊಂದರೆಯಾಗಿದೆ ಎಂದರು.

ಕೇಂದ್ರ ಸರ್ಕಾರದ ಬಳಿಗೆ ಸರ್ವ ಪಕ್ಷಗಳ ನಿಯೋಗ ಕರೆದೊಯ್ಯಬೇಕು. ಸಂವಿಧಾನದ 371ನೇ ವಿಧಿಯಡಿ ಸೇರಿಸಿ ವಿಶೇಷ ಸ್ಥಾನಮಾನ ನೀಡಬೇಕು ಎಂಬಂತಹ ಹಲವು ಸಲಹೆಗಳು ಬಂದಿವೆ ಎಂದು ಹೇಳಿದರು. ಕೇವಲ ಇದರ ಬಗ್ಗೆ ಸಂಪುಟಲ್ಲಿ ತೀರ್ಮಾನ ಮಾಡಬಾರದೆಂಬ ಉದ್ದೇಶದಿಂದ ರೈತರು, ಸಾರ್ವಜನಿಕರ ಅಭಿಪ್ರಾಯಗಳನ್ನು ಪಡೆದು ವಿಶೇಷ ಚರ್ಚೆಗೆ ಅವಕಾಶ ಮಾಡಿಕೊಡಲಾಗಿದೆ ಎಂದು ಹೇಳಿದರು.

ಕಳೆದ ಅಧಿವೇಶನದಲ್ಲಿ ನಾನು ಬಾಯಿ ತೆಗೆಯಲು ಪ್ರತಿಪಕ್ಷಗಳು ಬಿಡಲಿಲ್ಲ. ಹೀಗಾಗಿ ಎರಡು ದಿನ ಅಧಿವೇಶನ ಮೊಟಕುಗೊಂಡಿತ್ತು. ಸೆ.27ರೊಳಗೆ ರಾಜ್ಯದ ಅಭಿಪ್ರಾಯವನ್ನು ಕೇಂದ್ರಕ್ಕೆ ತಿಳಿಸಬೇಕಿದೆ. ರಾಜ್ಯದ ನಾಲ್ಕು ಭಾಗಗಳಲ್ಲಿ ಬರ ಪರಿಸ್ಥಿತಿ ಬಗ್ಗೆ ಚರ್ಚೆ ಮಾಡಲಾಗಿದೆ. ಈಗಾಗಲೇ 124 ತಾಲ್ಲೂಕುಗಳನ್ನು ಬರ ಪೀಡಿತ ಎಂದು ಘೋಷಣೆ ಮಾಡಲಾಗಿದೆ. ಪ್ರತಿಪಕ್ಷಗಳ ತೀವ್ರ ಒತ್ತಾಯದಿಂದಾಗಿ ನಿರಪರಾಧಿಯಾಗಿದ್ದ ಇವರ ರಾಜೀನಾಮೆಯನ್ನು ಅನಿವಾರ್ಯವಾಗಿ ಪಡೆಯಬೇಕಾಗಿತ್ತು. ಪಾದಯಾತ್ರೆ, ಪ್ರತಿಭಟನೆ ಮಾಡಲು ನಮ ತಕರಾರು ಇಲ್ಲ. ಕಸ್ತೂರಿ ರಂಗನ್ ವರದಿಯಿಂದ ಆಗುತ್ತಿರುವ ತೊಂದರೆಯನ್ನು ಕಣ್ಣಾರೆ ಕಂಡಿದ್ದೇನೆ. ಜನಾಭಿಪ್ರಾಯ ಪಡೆದಿದ್ದೇನೆ ಎಂದರು.

ಅಧಿಕಾರಿಗಳಿಗಿಂತ ರೈತರೇ ಚೆನ್ನಾಗಿ ಅಧ್ಯಯನ ಮಾಡಿದ್ದಾರೆ:

ಬಾಳೆಹೊನ್ನೂರು, ಸಕಲೇಶಪುರ ಮೊದಲಾದ ಕಡೆ ರೈತರ ಅಭಿಪ್ರಾಯ ಸಂಗ್ರಹಿಸಿದಾಗ ಅಧಿಕಾರಿಗಳಿಗಿಂತ ರೈತರೇ ಚೆನ್ನಾಗಿ ಕಸ್ತೂರಿ ರಂಗನ್ ವರದಿನ್ನು ಅಧ್ಯಯನ ಮಾಡಿದ್ದಾರೆ ಎಂಬುದು ತಿಳಿದುಬಂದಿತು. ಇಡೀ ದಿನಚರ್ಚೆಯಾಗಲಿ, ನಿಲುವಳಿ ಸೂಚನೆಯಂತಾದರೂ ಚರ್ಚೆಯಾಗಲಿ ಎಂದು ಮುಖ್ಯಮಂತ್ರಿ ತಿಳಿಸಿದರು.

ಬೆಂಗಳೂರಲ್ಲಿ ಮಾರಕಾಸ್ತ್ರಗಳನ್ನು ಹಿಡಿದು ಸಿಕ್ಕ ಸಿಕ್ಕವರ ಮೇಲೆ ದಾಳಿ ಆತಂಕ ಸೃಷ್ಟಿಸಿದ ಪುಂಡರು



"ಮುಂಜಾನೆಯ ಮೆರಗು"

ಬೆಂಗಳೂರು,ಸೆ.21– ನಗರದಲ್ಲಿ ಪುಂಡರ ಅಟ್ಟಹಾಸ ಮಿತಿಮೀರಿದ್ದು, ರಾತ್ರಿ ಮಾರಕಾಸ್ತ್ರಗಳನ್ನಿಡಿದು ರಸ್ತೆಯಲ್ಲಿ ಸಿಕ್ಕ ಸಿಕ್ಕವರ ಮೇಲೆ ದಾಳಿ ನಡೆಸಿರುವ ಘಟನೆ ಸುಬ್ರಮಣ್ಯಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ರಾತ್ರಿ 8.30 ರ ಸುಮಾರಿನಲ್ಲಿ ಸರ್ಕಲ್ ಮಾರಮ ದೇವಸ್ಥಾನ, 6ನೇ ಕ್ರಾಸ್ ಉತ್ತರಹಳ್ಳಿ ರಸ್ತೆ ಬದಿ ನಾಲ್ಕೈದು ಸ್ನೇಹಿತರು ಮಾತನಾಡುತ್ತಾ ನಿಂತಿದ್ದಾಗ ನಾಲ್ಕೈದು ಬೈಕ್‌ಗಳಲ್ಲಿ ಬಂದ ಆರೇಳು ಮಂದಿ ಪುಂಡರು ಇವರ ಬಳಿ ಬಂದು ಸೇಂದಿಲ್ ಎಲ್ಲಿ ಎಂದು ಕೇಳಿ ಮಚ್ಚು,ಲಾಂಗ್‌ಗಳಿಂದ ಹಲ್ಲೆಗೆ ಮುಂದಾಗಿದ್ದಾರೆ.

ಆ ವೇಳೆ ಸ್ನೇಹಿತರು ದಿಕ್ಕಾಪಾಲಾಗಿ ಓಡಿದ್ದು, ಈ ಪೈಕಿ ಕಿರಣ್ ಎಂಬಾತ ಸಿಕ್ಕಿಕೊಂಡು ಮಚ್ಚಿನ ದಾಳಿಗೆ ಒಳಗಾಗಿ ಗಾಯಗೊಂಡಿದ್ದಾರೆ.ನಂತರ ದುಷ್ಕರ್ಮಿಗಳು ಬೈಕ್ ಹತ್ತಿಕೊಂಡು ಪರಾರಿಯಾಗಿದ್ದಾರೆ. ದಾಳಿಯಿಂದ ಗಾಯಗೊಂಡಿದ್ದ ಕಿರಣ್ ಅವರನ್ನು ತಕ್ಷಣ ಆಸ್ಪತ್ರೆಗೆ ದಾಖಲಿಸಲಾಗಿದೆ.

ಇದಾದ ಕೆಲವೇ ನಿಮಿಷಗಳಲ್ಲಿ ಇದೇ ಗುಂಪು ಉತ್ತರಹಳ್ಳಿ ರಸ್ತೆಯ ಅರೆಹಳ್ಳಿ ಆರ್ಚ್ ಬಳಿಗೆ ರಾತ್ರಿ 8.50 ರ ಸುಮಾರಿನಲ್ಲಿ ತೆರಳಿದ್ದು,ಮೀನು ಅಂಗಡಿಗೆ ನುಗ್ಗಿ ಮೀನು ಸೇವಿಸುತ್ತಿದ್ದವರ ಮೇಲೆ ಮನ ಬಂದಂತೆ ಮಾರಕಾಸ್ತ್ರಗಳಿಂದ ದಾಳಿ ಮಾಡಿ ಸ್ಥಳದಿಂದ ಪರಾರಿಯಾಗಿದ್ದಾರೆ. ಏನಾಗುತ್ತಿದೆ ಎಂದು ಯೋಚಿಸುವಷ್ಟರಲ್ಲೇ ಮೂವರು ಮಚ್ಚಿನೇಟಿನಿಂದ ಗಾಯಗೊಂಡಿದ್ದಾರೆ. ಶ್ರೀನಿವಾಸ್ ಮತ್ತು ರಘುನಂದನ್ ಹಾಗೂ ಮತ್ತೊಬ್ಬರು ಗಾಯಗೊಂಡಿದ್ದು, ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಯಾವ ಉದ್ದೇಶಕ್ಕಾಗಿ ಬೈಕ್‌ಗಳಲ್ಲಿ ಬಂದು ಸಿಕ್ಕ ಸಿಕ್ಕ ಸಾರ್ವಜನಿಕರ ಮೇಲೆ ಅಪರಿಚಿತರ ಗುಂಪು ದಾಳಿ ಮಾಡಿದೆ ಎಂಬುವುದು ಸದ್ಯಕ್ಕೆ ತಿಳಿದು ಬಂದಿಲ್ಲ.ಸುದ್ದಿ ತಿಳಿಯುತ್ತಿದ್ದಂತೆ ಸುಬ್ರಮಣ್ಯಪುರ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದ್ದಾರೆ. ಘಟನಾ ಸ್ಥಳಗಳ ಸುತ್ತಮುತ್ತಲಿನ ಸಿಸಿ ಕ್ಯಾಮೆರಾಗಳನ್ನು ಪರಿಶೀಲಿಸಿ ಅದರಲ್ಲಿನ ದೃಶ್ಯಾವಳಿಗಳನ್ನಾಧರಿಸಿ ದುಷ್ಕರ್ಮಿಗಳ ಪತ್ತೆಗೆ ಪೊಲೀಸರು ಬಲೆ ಬೀಸಿದ್ದಾರೆ.

ಸೌಜನ್ಯ ಕೊಲೆ ಕೇಸ್ಗೆ ಹೊಸ ಟ್ವಿಸ್ಟ್ : ಪ್ರಕರಣದ ಮರು ತನಿಖೆಗೆ ಸುಪ್ರೀಂ ಆಸ್ತು



"ಮುಂಜಾನೆಯ ಮೆರಗು"

ನವದೆಹಲಿ, ಸೆ.21– ಕಳೆದ 2012ರಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳ ಸಮೀಪ ನಡೆದಿದ್ದ ಕಾಲೇಜು ವಿದ್ಯಾರ್ಥಿನಿ ಸೌಜನ್ಯ ಕೊಲೆ ಪ್ರಕರಣದ ಮರು ತನಿಖೆಗೆ ಸುಪ್ರೀಂಕೋರ್ಟ್ ಆಸ್ತು ಎಂದಿದೆ.ಸೌಜನ್ಯ ಅತ್ಯಾಚಾರ, ಕೊಲೆ ಪ್ರಕರಣದ ಹೊಸದಾಗಿ ತನಿಖೆಗೆ ಕೋರ್ಟ್ ಆದೇಶಿಸಿದ್ದು, 3 ತಿಂಗಳೊಳಗೆ ತನಿಖೆ ಪೂರ್ಣಗೊಳಿಸಿ ವರದಿ ಸಲ್ಲಿಸುವಂತೆ ಸೂಚನೆ ನೀಡುವ ಮೂಲಕ ಸೌಜನ್ಯ ಪ್ರಕರಣಕ್ಕೆ ಮತ್ತೆ ಮರುಜೀವ ನೀಡಲಾಗಿದೆ.

ಸೌಜನ್ಯ ತಾಯಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸಂಜಯ್ ಕುಮಾರ್ ನೇತೃತ್ವದ ಪೀಠ, ಈ ಹಿಂದೆ ಪ್ರಕರಣದ ತನಿಖೆ ನಡೆಸಿದ್ದ ಅಧಿಕಾರಿಗಳನ್ನು ಹೊಸ ತನಿಖೆಯಲ್ಲಿ ಸೇರಿಸದಂತೆ ನಿರ್ದೇಶನ ನೀಡಿದ್ದು, ಹೊಸ ತಂಡದಿಂದ ಸ್ವತಂತ್ರವಾಗಿ ಮರು ತನಿಖೆ ನಡೆಸುವಂತೆ ಸೂಚಿಸಿದೆ.

ಪ್ರಕರಣದ ತನಿಖೆ ಮತ್ತು ಸಾಕ್ಷ್ಯಗಳ ಕುರಿತು ಈ ಹಿಂದೆ ಸುಪ್ರೀಂ ಕೋರ್ಟ್ ಗಂಭೀರ ಪ್ರಶ್ನೆಗಳನ್ನು ಎತ್ತಿತ್ತು. ಸಂತೋಷ್ ರಾವ್ ನಿರಪರಾಧಿ, ಪ್ರಕರಣವನ್ನು ಬೇರೆ ಯಾರೋ ನಡೆಸಿದ್ದಾರೆ ಎಂಬುದು ಅರ್ಜಿದಾರರ ಪರ ವಕೀಲರ ವಾದವಾಗಿತ್ತು. 140ರಿಂದ 150 ಪುಟಗಳ ಸಾಕ್ಷ್ಯವನ್ನು ತೆಗೆದುಹಾಕಲಾಗಿದೆ ಎಂಬ ಆರೋಪವೂ ವಿಚಾರಣೆಯಲ್ಲಿ ಪ್ರಸ್ತಾಪವಾಗಿತ್ತು.

2012 ರ ಅಕ್ಟೋಬರ್‌ನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳದ ಉಜಿರೆ ಎಸ್‌ಡಿಎಂ ಕಾಲೇಜಿನ ದ್ವಿತೀಯ ಪಿಯುಸಿ ವಿದ್ಯಾರ್ಥಿನಿಯಾಗಿದ್ದ 17 ವರ್ಷದ ಸೌಜನ್ಯಾಳನ್ನು ಅಪಹರಿಸಿ, ಅತ್ಯಾಚಾರ ಎಸಗಿ ಅತ್ಯಂತ ಕ್ರೂರವಾಗಿ ಕೊಲೆ ಮಾಡಲಾಗಿತ್ತು.

ಘಟನೆ ನಡೆದ ಕೆಲವು ದಿನಗಳ ನಂತರ ಪೊಲೀಸರು ಸಂತೋಷ್‌ರಾವ್ ಎಂಬಾತನನ್ನು ಮುಖ್ಯ ಆರೋಪಿಯನ್ನಾಗಿ ಬಂಧಿಸಿದ್ದರು. ಸಾರ್ವಜನಿಕರ ತೀವ್ರ ಆಕ್ರೋಶ ಮತ್ತು ಪ್ರತಿಭಟನೆಗಳ ನಂತರ, ಪ್ರಕರಣವನ್ನು ಮೊದಲು ಸಿಐಡಿ ಮತ್ತು ನಂತರ ಕೇಂದ್ರ ತನಿಖಾ ದಳಕ್ಕೆ ವಹಿಸಲಾಗಿತ್ತು. ಪ್ರಕರಣದ ಸುದೀರ್ಘ ವಿಚಾರಣೆ ನಡೆಸಿದ ಬೆಂಗಳೂರಿನ ವಿಶೇಷ ಸಿಬಿಐ ನ್ಯಾಯಾಲಯವು ಆರೋಪಿ ಸಂತೋಷ್ ರಾವ್ ವಿರುದ್ಧ ಸೂಕ್ತ ಸಾಕ್ಷ್ಯಾಧಾರಗಳಿಲ್ಲದ ಕಾರಣ ಆತನನ್ನು ಆರೋಪಮುಕ್ತಗೊಳಿಸಿತ್ತು.

ಸಿಬಿಐ ತನಿಖೆಯಲ್ಲಿ ಲೋಪದೋಷಗಳಿದ್ದು, ನೈಜ ಆರೋಪಿಗಳನ್ನು ರಕ್ಷಿಸಲಾಗಿದೆ ಎಂದು ಆರೋಪಿಸಿ ಸೌಜನ್ಯಾಳ ತಾಯಿ ಕುಸುಮಾವತಿ ಅವರು ಮರುತನಿಖೆಗೆ ಕೋರಿ ಕರ್ನಾಟಕ ಹೈಕೋರ್ಟ್ ಮೆಟ್ಟಿಲೇರಿದ್ದರು. ಆದರೆ, ಹೈಕೋರ್ಟ್ ಈ ಅರ್ಜಿಯನ್ನು ತಿರಸ್ಕರಿಸಿತ್ತು. ಹೀಗಾಗಿ ಹೈಕೋರ್ಟ್ ತೀರ್ಪನ್ನು ಪ್ರಶ್ನಿಸಿ ಅವರು ಸುಪ್ರೀಂ ಕೋರ್ಟ್‌ನಲ್ಲಿ ವಿಶೇಷ ಮೇಲ್ಮನವಿ ಸಲ್ಲಿಸಿದ್ದರು. ತನಿಖಾ ಸಂಸ್ಥೆಯ ವೈಫಲ್ಯವನ್ನು ಗಂಭೀರವಾಗಿ ಪರಿಗಣಿಸಿದ ಸುಪ್ರೀಂ ಕೋರ್ಟ್ ಇದೀಗ ಪ್ರಕರಣದ ಮರುತನಿಖೆ ನಡೆಸುವಂತೆ ಆದೇಶ ಹೊರಡಿಸಿದೆ.

ವಿಧಾನಸಭೆ ಕಲಾಪ ಆರಂಭವಾಗುತ್ತಿದ್ದಂತೆ ಆಡಳಿತ–ವಿಪಕ್ಷಗಳ ನಡುವೆ 'ವಂದೇ ಮಾತರಂ' ವಾಗ್ವಾದ



"ಮುಂಜಾನೆಯ ಮೆರಗು"


ಬೆಂಗಳೂರು, ಸೆ.21– ವಂದೇ ಮಾತರಂ ಕುರಿತ ಗದ್ದಲ ವಿಧಾನಸಭೆಯ ಕಲಾಪದ ಆರಂಭದಲ್ಲೇ ಪ್ರತಿಧ್ವನಿಸಿದ್ದು, ವಿರೋಧ ಪಕ್ಷ ಮತ್ತು ಆಡಳಿತ ಪಕ್ಷಗಳ ನಡುವೆ ತಾಳಮೇಳ ಇಲ್ಲದಂತಹ ವಾತಾವರಣ ನಿರ್ಮಾಣವಾಯಿತು. ಕಸ್ತೂರಿ ರಂಗನ್ ವರದಿ ಮತ್ತು ಬರ ಪರಿಸ್ಥಿತಿಯ ಕುರಿತು ಚರ್ಚೆಗಾಗಿ ಕರೆದಿರುವ ವಿಶೇಷ ಅಧಿವೇಶನದ ಮೊದಲನೇ ದಿನವಾದ ಇಂದು ಅರ್ಧ ಗಂಟೆ ತಡವಾಗಿ ಕಲಾಪ ಆರಂಭವಾಯಿತು.

ಎಂದಿನಂತೆ ವಂದೇ ಮಾತರಂ ಗೀತೆಯನ್ನು ಪ್ರಸಾರ ಮಾಡಲಾಯಿತು. ರಾಜ್ಯ ಸರ್ಕಾರದ ಆದೇಶದಂತೆ ಎರಡು ಚರಣಗಳ ಬಳಿಕ ವಂದೇಮಾತರಂ ನಿಲ್ಲಿಸಲಾಯಿತು. ಆದರೆ ಬಿಜೆಪಿ ಮತ್ತು ಜೆಡಿಎಸ್ನ ಶಾಸಕರು ತಮ ಕೈಯಲ್ಲಿ ವಂದೇ ಮಾತರಂ ಗೀತೆಯ ಮುದ್ರಿತ ಪ್ರತಿಯನ್ನು ಹಿಡಿದು ಬಾಕಿ ಉಳಿದ ಚರಣಗಳ ಗಾಯನವನ್ನು ಮುಂದುವರೆಸಿದರು.

ಈ ಮಧ್ಯೆ ಸಭಾಧ್ಯಕ್ಷ ಜಿ.ಎಸ್.ಪಾಟೀಲ ನಿಗದಿತ ವೇಳಾಪಟ್ಟಿಯಂತೆ ಕಲಾಪ ಮುಂದುವರೆಸಿದರು. ವಂದೇ ಮಾತರಂ ಗೀತೆಯ ಪ್ರಸಾರ ನಿಂತ ಬಳಿಕ ಸಂವಿಧಾನದ ಪೀಠಿಕೆಯನ್ನು ಬೋಧಿಸಿದರು. ನಂತರ ಸಂತಾಪ ಸೂಚನೆಯನ್ನು ಕೈಗೆತ್ತಿ–ಕೊಂಡರು. ಇತ್ತ ಬಿಜೆಪಿಯ ಶಾಸಕರು ಪೂರ್ಣ ಚರಣಗಳನ್ನು ಹಾಡಿದ ಬಳಿಕ ತಾವಾಗಿಯೇ ಸಂವಿಧಾನದ ಪೀಠಿಕೆಯನ್ನು ಓದಿದರು.

ಬಳಿಕ ಭಾರತ್ ಮಾತಾಕೀ ಜೈ, ವಂದೇಮಾತರಂ, ಜೈಭೀಮ್ ಘೋಷಣೆಗಳನ್ನು ಕೂಗಿದರು. ಆದರೆ ಇದ್ಯಾವುದನ್ನು ಕೇಳಿಸಿಕೊಳ್ಳದಂತೆ ಆಡಳಿತ ಪಕ್ಷದ ಕಡೆಯಿಂದ ಮುಂದುವರೆದ ಕಲಾಪಗಳು ನಡೆಯುತ್ತಿದ್ದವು. ವಂದೇ ಮಾತರಂ ವಿಚಾರವಾಗಿ ವಿಧಾನಪರಿಷತ್‌ನಲ್ಲಾದಂತೆ ಯಾವುದೇ ಚರ್ಚೆ, ಗದ್ದಲಗಳು ನಡೆಯಲಿಲ್ಲ. ಆಡಳಿತ ಪಕ್ಷ ಕಾಂಗ್ರೆಸ್‌ನವರು ತಮ ನಿಲುವಿಗೆ ಬದ್ಧರಾಗಿ ಎರಡು ಚರಣಗಳನ್ನು ಹಾಡಿದರೆ, ವಿರೋಧ ಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ಪೂರ್ಣ ಚರಣಗಳನ್ನು ಹಾಡಿ, ಮುಂದುವರೆದ ಕಲಾಪದಲ್ಲಿ ಭಾಗವಹಿಸಿದರು.

3 ದಿನದ ವಿಶೇಷ ಅಧಿವೇಶನವನ್ನು ಒಂದು ವಾರಕ್ಕೆ ವಿಸ್ತರಿಸಲು ಬಿ.ವೈ.ವಿಜಯೇಂದ್ರ ಆಗ್ರಹ



"ಮುಂಜಾನೆಯ ಮೆರಗು"

ಬೆಂಗಳೂರು,ಸೆ.21– ರಾಜ್ಯದ ವಿವಿಧ ಗಂಭೀರ ಸಮಸ್ಯೆಗಳು ಹಾಗೂ ಸಂಕಷ್ಟಗಳ ಕುರಿತು ಸಮಗ್ರವಾಗಿ ಚರ್ಚಿಸಲು ಕೇವಲ ಮೂರು ದಿನಗಳ ವಿಶೇಷ ಅಧಿವೇಶನ ಸಾಕಾಗುವುದಿಲ್ಲ. ಆದ್ದರಿಂದ ವಿಶೇಷ ಅಧಿವೇಶನವನ್ನು ಕನಿಷ್ಠ ಒಂದು ವಾರಕ್ಕೆ ವಿಸ್ತರಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಸ್ತೂರಿರಂಗನ್ ವರದಿ, ರಾಜ್ಯದಲ್ಲಿ ತಲೆದೋರಿರುವ ಭೀಕರ ಬರಗಾಲ, ಸಂಕಷ್ಟದಲ್ಲಿರುವ ರೈತರು ಸೇರಿದಂತೆ ಹಲವು ಪ್ರಮುಖ ವಿಚಾರಗಳ ಕುರಿತು ಚರ್ಚಿಸಲು ಸರ್ಕಾರ ಮೂರು ದಿನಗಳ ವಿಶೇಷ ಅಧಿವೇಶನ ಕರೆದಿದೆ. ಆದರೆ ಈ ಎಲ್ಲ ಗಂಭೀರ ವಿಚಾರಗಳಿಗೆ ಸಮಗ್ರ ಚರ್ಚೆ ನಡೆಸಲು ಮೂರು ದಿನಗಳು ಸಾಕಾಗುವುದಿಲ್ಲ. ಹೀಗಾಗಿ ವಿಧಾನಸಭೆಯ ವಿರೋಧ ಪಕ್ಷದ ನಾಯಕರು, ಬಿಜೆಪಿ ಹಾಗೂ ಜೆಡಿಎಸ್ ಶಾಸಕರು ಸೇರಿದಂತೆ ನಾವು ಕನಿಷ್ಠ ಒಂದು ವಾರ ಅಧಿವೇಶನ ನಡೆಸಬೇಕೆಂದು ಆಗ್ರಹಿಸಿದ್ದೇವೆ ಎಂದರು.

ಇತ್ತೀಚೆಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಬಿಜೆಪಿಯವರು ಜನರ ಭಾವನೆಗಳ ಮೇಲೆ ಆಡಳಿತ ನಡೆಸುತ್ತಾರೆ ಹಾಗೂ ಕಾಂಗ್ರೆಸ್ ಜನರ ಬದುಕನ್ನು ಕಟ್ಟಿಕೊಡುವ ಕೆಲಸ ಮಾಡುತ್ತದೆ ಎಂಬರ್ಥದಲ್ಲಿ ಮಾತನಾಡಿದ್ದರು. ಆದರೆ ಕಳೆದ ಮೂರು ಕಾಲು ವರ್ಷಗಳಲ್ಲಿ ಕಾಂಗ್ರೆಸ್ ಸರ್ಕಾರ ನಿಜವಾಗಿಯೂ ಜನರ ಬದುಕನ್ನು ಕಟ್ಟಿಕೊಡುವ ಕೆಲಸ ಮಾಡಿದೆಯೇ ಅಥವಾ ಜನರ ಬದುಕಿನೊಂದಿಗೆ ಚೆಲ್ಲಾಟವಾಡಿದೆಯೇ ಎಂಬುದನ್ನೂ ಈ ಅಧಿವೇಶನದಲ್ಲಿ ಚರ್ಚಿಸಬೇಕಿದೆ ಎಂದು ಹೇಳಿದರು.

ಬಿಜೆಪಿ ಹಮಿಕೊಂಡಿದ್ದ 10 ದಿನಗಳ ಬಳ್ಳಾರಿ ಚಲೋ ಪಾದಯಾತ್ರೆ ಅತ್ಯಂತ ಪರಿಣಾಮಕಾರಿಯಾಗಿ ನಡೆದಿದೆ. ಈ ಹೋರಾಟದಿಂದ ರಾಜ್ಯ ಸರ್ಕಾರದ ಮೇಲೆ ಒತ್ತಡ ನಿರ್ಮಾಣವಾಗಿದೆ. ಸರ್ಕಾರದ ಪ್ರತಿಕ್ರಿಯೆಗಳನ್ನು ಗಮನಿಸಿದರೆ, ಬಳ್ಳಾರಿ ಚಲೋ ಹೋರಾಟದಿಂದ ಮುಖ್ಯಮಂತ್ರಿಗಳು ವಿಚಲಿತರಾದಂತೆ ಕಾಣುತ್ತಿದೆ ಎಂದು ಹೇಳಿದರು.

ಬಿಜೆಪಿ ನಡೆಸಿದ ನಿರಂತರ ಹೋರಾಟದ ಒತ್ತಡಕ್ಕೆ ಮಣಿದು ಸರ್ಕಾರ ವಿಶೇಷ ಅಧಿವೇಶನ ಕರೆಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಅಧಿವೇಶನದಲ್ಲಿ ಬಿಜೆಪಿ ಹಾಗೂ ನಮ ಮಿತ್ರಪಕ್ಷ ಜೆಡಿಎಸ್ ಒಟ್ಟಾಗಿ ರೈತರ ಪರವಾಗಿ ಬಲವಾಗಿ ಧ್ವನಿ ಎತ್ತಲಿವೆ.

ರಾಜ್ಯದ ರೈತರು ಎದುರಿಸುತ್ತಿರುವ ಬರಗಾಲದ ಸಂಕಷ್ಟ, ಬೆ

ಬರಪೀಡಿತ ಪಟ್ಟಿಗೆ ಜಗಳೂರು ಸೇರ್ಪಡೆಗೆ ಆಗ್ರಹ

ಬಿಜೆಪಿ ಬಂದ್‌ಗೆ ವರ್ತಕರ ಸಂಪೂರ್ಣ ಬೆಂಬಲ; ಬೆಳಗ್ಗೆಯಿಂದ ಮಧ್ಯಾಹ್ನದವರೆಗೆ ಪಟ್ಟಣ ಸ್ತಬ್ಧ

"ಮುಂಜಾನೆಯ ಮೆರಗು"

ಜಗಳೂರು ಸೆ, 21– ಜಗಳೂರು ತಾಲೂಕನ್ನು ಬರಪೀಡಿತ ಪ್ರದೇಶಗಳ ಪಟ್ಟಿಗೆ ಸೇರ್ಪಡೆಗೊಳಿಸಬೇಕು ಹಾಗೂ ಭದ್ರಾ ಮೇಲ್ದಂಡೆ ನೀರಾವರಿ ಯೋಜನೆಯ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಬೇಕು ಎಂದು ಒತ್ತಾಯಿಸಿ ಭಾರತೀಯ ಜನತಾ ಪಕ್ಷದ ವತಿಯಿಂದ ಸೋಮವಾರ ಹಮ್ಮಿಕೊಂಡಿದ್ದ ಜಗಳೂರು ಬಂದ್‌ಗೆ ಪಟ್ಟಣದ ವರ್ತಕರು, ವ್ಯಾಪಾರಸ್ಥರು ಹಾಗೂ ಸಾರ್ವಜನಿಕರಿಂದ ವ್ಯಾಪಕ ಬೆಂಬಲ ವ್ಯಕ್ತವಾಯಿತು.

ಬಂದ್ ಹಿನ್ನೆಲೆಯಲ್ಲಿ ಸೋಮವಾರ ಬೆಳಗ್ಗೆ 6 ಗಂಟೆಯಿಂದಲೇ ಪಟ್ಟಣದ ಪ್ರಮುಖ ವಾಣಿಜ್ಯ ಪ್ರದೇಶಗಳು ಬಹುತೇಕ ಸ್ತಬ್ಧವಾಗಿದ್ದವು. ಹೂವು, ಹಣ್ಣು, ತರಕಾರಿ, ಕಿರಾಣಿ, ಬಟ್ಟೆ ಅಂಗಡಿಗಳು, ಹೋಟೆಲ್‌ಗಳು ಸೇರಿದಂತೆ ವಿವಿಧ ವ್ಯಾಪಾರ ಮಳಿಗೆಗಳ ಮಾಲೀಕರು ಸ್ವಯಂಪ್ರೇರಿತವಾಗಿ ಅಂಗಡಿ–ಮುಂಗಟ್ಟುಗಳನ್ನು ಮುಚ್ಚಿ ಬಂದ್‌ಗೆ ಸಹಕಾರ ನೀಡಿದರು.

ಬೆಳಗ್ಗೆಯಿಂದಲೇ ಪಟ್ಟಣದ ಪ್ರಮುಖ ರಸ್ತೆಗಳು ಹಾಗೂ ಮಾರುಕಟ್ಟೆ ಪ್ರದೇಶಗಳಲ್ಲಿ ವ್ಯಾಪಾರ ಚಟುವಟಿಕೆಗಳು ಸ್ಥಗಿತಗೊಂಡಿದ್ದರಿಂದ ಜಗಳೂರು ಪಟ್ಟಣ ಬಂದ್ ವಾತಾವರಣಕ್ಕೆ ಒಳಗಾಗಿತ್ತು. ಬೆಳಗ್ಗೆ 6ರಿಂದ ಸುಮಾರು 11 ಗಂಟೆಯವರೆಗೆ ಬಂದ್‌ನ ಬಿಸಿ ತೀವ್ರವಾಗಿತ್ತು. ನಂತರ ಹಂತ ಹಂತವಾಗಿ ಕೆಲವು ಪ್ರದೇಶಗಳಲ್ಲಿ ಸಂಚಾರ ಮತ್ತು ಚಟುವಟಿಕೆಗಳು ಆರಂಭವಾದರೂ, ಹಲವು ಅಂಗಡಿ–ಮುಂಗಟ್ಟುಗಳು ಸಂಜೆಯವರೆಗೂ ಬಾಗಿಲು ತೆರೆಯಲಿಲ್ಲ.

ರಸ್ತೆಗಿಳಿದ ಬಿಜೆಪಿ ಕಾರ್ಯಕರ್ತರು

ಬರಪೀಡಿತ ತಾಲೂಕು ಪಟ್ಟಿಗೆ ಜಗಳೂರನ್ನು ಸೇರ್ಪಡೆಗೊಳಿಸುವಂತೆ ಒತ್ತಾಯಿಸಿ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಪಟ್ಟಣದ ವಿವಿಧೆಡೆ ಪ್ರತಿಭಟನೆ ನಡೆಸಿದರು. ಚಿಳ್ಳಕೆರೆ ರಸ್ತೆಯಲ್ಲಿ ಟೈರ್‌ಗೆ ಬೆಂಕಿ ಹಚ್ಚಿ ಆಕ್ರೋಶ ವ್ಯಕ್ತಪಡಿಸಿದ ಪ್ರತಿಭಟನಾಕಾರರು, ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಬರಪೀಡಿತ ಪಟ್ಟಿಗೆ ಜಗಳೂರನ್ನು ಸೇರಿಸುವಂತೆ ಒತ್ತಾಯಿಸಿದರು.



ಪ್ರತಿಭಟನೆಯ ಸಂದರ್ಭದಲ್ಲಿ ಪೊಲೀಸರು ಮುನ್ನೆಚ್ಚರಿಕೆ ಕ್ರಮ ಕೈಗೊಂಡರು. ಕೆಲ ಪ್ರತಿಭಟನಾಕಾರರನ್ನು ಪೊಲೀಸರು ವಶಕ್ಕೆ ಪಡೆದ ಬಳಿಕ ಪ್ರತಿಭಟನೆಯ ಕಾವು ಕ್ರಮೇಣ ಕಡಿಮೆಯಾಯಿತು. ವಾಹನ ಸಂಚಾರಕ್ಕೆ ಪೊಲೀಸರು ಅನುವು ಮಾಡಿಕೊಟ್ಟರು.

ಮಾಜಿ ಶಾಸಕರಿಬ್ಬರ ಬಂಧನ

ಪ್ರತಿಭಟನೆಯ ಸಂದರ್ಭದಲ್ಲಿ ಮಾಜಿ ಶಾಸಕರಾದ ಹೆಚ್.ಪಿ. ರಾಜೇಶ್ ಹಾಗೂ ಎಸ್.ವಿ. ರಾಮಚಂದ್ರ ಅವರನ್ನು ಪೊಲೀಸರು ವಶಕ್ಕೆ ಪಡೆದ ಘಟನೆ ಪ್ರತಿಭಟನಾ ಸ್ಥಳದಲ್ಲಿ ಕೆಲಕಾಲ ಉದ್ವಿಗ್ನ ವಾತಾವರಣಕ್ಕೆ ಕಾರಣವಾಯಿತು. ಪ್ರತಿಭಟನಾಕಾರರನ್ನು ಪೊಲೀಸರು ವಶಕ್ಕೆ ಪಡೆಯುತ್ತಿದ್ದಂತೆ ಸ್ಥಳದಲ್ಲಿದ್ದ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದರು.

ಈ ನಡುವೆ ಸರ್ಕಾರಿ ಬಸ್‌ನ ಗಾಜು ಒಡೆದ ಘಟನೆ ಕೂಡ ನಡೆದಿದೆ. ಘಟನೆ ಹಿನ್ನೆಲೆಯಲ್ಲಿ ಪೊಲೀಸರು ಪರಿಸ್ಥಿತಿಯನ್ನು ನಿಯಂತ್ರಿಸಲು ಮುಂದಾದರು. ಪಟ್ಟಣದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು.

ಮದ್ಯದಂಗಡಿಗಳೂ ಬಂದ್; ಗ್ರಾಹಕರ ಪರದಾಟ

ಬಂದ್ ಹಿನ್ನೆಲೆಯಲ್ಲಿ ಮದ್ಯದಂಗಡಿಗಳೂ ಮುಚ್ಚಿದ್ದವು. ಇದರಿಂದ ಮದ್ಯ ಖರೀದಿಗೆ ಬಂದಿದ್ದ ಗ್ರಾಹಕರು ಪರದಾಡುವಂತಾಯಿತು. ಬೆಳಗ್ಗೆಯಿಂದಲೇ ಮದ್ಯದಂಗಡಿಗಳ ಮುಂದೆ ಗ್ರಾಹಕರ ಸಂಚಾರ ಕಂಡುಬಂದರೂ, ಬಂದ್ ಹಿನ್ನೆಲೆಯಲ್ಲಿ ಅಂಗಡಿಗಳು ತೆರೆಯದ ಕಾರಣ ನಿರಾಸೆಯಿಂದ ಹಿಂದಿರುಗಿದರು.

"ಜಗಳೂರಿಗೆ ಅನ್ಯಾಯವಾಗುತ್ತಿದೆ" – ಹೆಚ್.ಪಿ. ರಾಜೇಶ್

ಪ್ರತಿಭಟನೆಯ ಸಂದರ್ಭದಲ್ಲಿ ಮಾತನಾಡಿದ ಮಾಜಿ ಶಾಸಕ ಹೆಚ್.ಪಿ. ರಾಜೇಶ್, ಜಗಳೂರು ತಾಲೂಕನ್ನು ಬರಪೀಡಿತ ಪ್ರದೇಶಗಳ ಪಟ್ಟಿಗೆ ಸೇರಿಸುವ ವಿಚಾರದಲ್ಲಿ ಸರ್ಕಾರ ವಿಳಂಬ ಧೋರಣೆ ಅನುಸರಿಸುತ್ತಿರುವುದು ಸರಿಯಲ್ಲ ಎಂದು ಆರೋಪಿಸಿದರು.

ಜಗಳೂರು ತಾಲೂಕು ರಾಜ್ಯದಲ್ಲಿಯೇ ಅತಿ ಹಿಂದುಳಿದ ತಾಲೂಕುಗಳಲ್ಲಿ ಒಂದಾಗಿದ್ದು, ಇಲ್ಲಿ ಯಾವುದೇ ನದಿ ಮೂಲವಿಲ್ಲ. ಮಳೆ ಕೊರತೆಯಿಂದ ಕೃಷಿಯನ್ನೇ ಅವಲಂಬಿಸಿರುವ ರೈತರು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಜಗಳೂರನ್ನು ಬರಪೀಡಿತ ಪಟ್ಟಿಗೆ ಸೇರಿಸುವಲ್ಲಿ ವಿಳಂಬ ಮಾಡುತ್ತಿರುವುದು ರೈತರಿಗೆ ಅನ್ಯಾಯ ಮಾಡಿದಂತಾಗಿದೆ ಎಂದು ಹೇಳಿದರು.

ಜಿಲ್ಲೆಯ ನೀರಾವರಿ ಸೌಲಭ್ಯ ಹೊಂದಿರುವ ಕೆಲವು ತಾಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸಲಾಗಿದ್ದು, ನದಿ ಮೂಲವೂ ಇಲ್ಲದೆ ಮಳೆ ಆಧಾರಿತ ಕೃಷಿಯನ್ನೇ ಅವಲಂಬಿಸಿರುವ ಜಗಳೂರನ್ನು ಕಡೆಗಣಿಸಿರುವುದು ಏಕೆ ಎಂಬ ಪ್ರಶ್ನೆ ಎದುರಾಗಿದೆ ಎಂದು ಅವರು ಹೇಳಿದರು.

"ನಾವು ಶಾಂತಿಯುತವಾಗಿ ಬಂದ್ ಆಚರಿಸುತ್ತಿದ್ದೇವೆ. ಪೊಲೀಸ್ ಇಲಾಖೆಯವರು ಪ್ರತಿಭಟನೆಗೆ ಸಹಕಾರ ನೀಡಬೇಕು. ರಾಜಕೀಯ ಒತ್ತಡಕ್ಕೆ ಮಣಿದು ಪ್ರತಿಭಟನಾಕಾರರನ್ನು ಎದುರಿಸುವ ಅಥವಾ ಬಂಧಿಸುವ ಕ್ರಮ ಕೈಗೊಳ್ಳಬಾರದು" ಎಂದು ಹೆಚ್.ಪಿ. ರಾಜೇಶ್ ಹೇಳಿದರು.

"ಹೋರಾಟ ಮತ್ತಷ್ಟು ತೀವ್ರಗೊಳಿಸುತ್ತೇವೆ"





– ಎಸ್.ವಿ. ರಾಮಚಂದ್ರ

ಮಾಜಿ ಶಾಸಕ ಎಸ್.ವಿ. ರಾಮಚಂದ್ರ ಮಾತನಾಡಿ, ಜಗಳೂರು ತಾಲೂಕಿನ ರೈತರು ಎದುರಿಸುತ್ತಿರುವ ಸಂಕಷ್ಟವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸುತ್ತಿಲ್ಲ ಎಂದು ಆರೋಪಿಸಿದರು.

ಮಳೆ ಕೊರತೆ, ಬೆಳೆ ನಷ್ಟ ಹಾಗೂ ನೀರಿನ ಸಮಸ್ಯೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಇಂತಹ ಸಂದರ್ಭದಲ್ಲಿ ಜಗಳೂರು ತಾಲೂಕನ್ನು ಬರಪೀಡಿತ ಪ್ರದೇಶಗಳ ಪಟ್ಟಿಗೆ ಸೇರಿಸುವುದು ಸರ್ಕಾರದ ಜವಾಬ್ದಾರಿಯಾಗಿದೆ. ಈ ಬೇಡಿಕೆಯನ್ನು ಮುಂದಿಟ್ಟುಕೊಂಡೇ ಬಂದ್ ನಡೆಸಲಾಗಿದ್ದು, ಸರ್ಕಾರ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ಭದ್ರಾ ಮೇಲ್ದಂಡೆ ಕಾಮಗಾರಿ ವೇಗಕ್ಕೆ ಆಗ್ರಹ

ಜಗಳೂರು ತಾಲೂಕಿನ ಬಹುದಿನಗಳ ನೀರಾವರಿ ಬೇಡಿಕೆಯಾಗಿರುವ ಭದ್ರಾ ಮೇಲ್ದಂಡೆ ಯೋಜನೆಯ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಕೈಗೊಳ್ಳಬೇಕು ಎಂಬ ಆಗ್ರಹವೂ ಬಂದ್‌ನಲ್ಲಿ ಪ್ರಮುಖವಾಗಿ ಕೇಳಿಬಂದಿತು. ನೀರಾವರಿ ಸೌಲಭ್ಯ ವಿಸ್ತರಣೆಯಾದರೆ ಬರದ ಹೊಡೆತದಿಂದ ರೈತರಿಗೆ ಸ್ವಲ್ಪ ಮಟ್ಟಿನ ಪರಿಹಾರ ದೊರೆಯಲಿದೆ. ಆದ್ದರಿಂದ ಯೋಜನೆಯ ಕಾಮಗಾರಿಯನ್ನು ವಿಳಂಬ ಮಾಡದೆ ವೇಗವಾಗಿ ಪೂರ್ಣಗೊಳಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ವಿವಿಧ ಮೋರ್ಚಾಗಳ ಕಾರ್ಯಕರ್ತರ ಪಾಲ್ಗೊಳ್ಳುವಿಕೆ

ಬಂದ್ ಹಾಗೂ ಪ್ರತಿಭಟನೆಯಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಎ.ಎಂ. ಮರುಳ, ರಾಜ್ಯ ಪ್ರಧಾನ ಕಾರ್ಯದರ್ಶಿ ಧರ್ಮನಾಯ್ಕ, ಪಲ್ಲಗಟ್ಟಿ ಮಹೇಶ್, ದೇವಿಕೆರೆ ಶಿವಕುಮಾರ ಸ್ವಾಮಿ ಸೇರಿದಂತೆ ಪಕ್ಷದ ವಿವಿಧ ಮುಖಂಡರು ಹಾಗೂ ಪದಾಧಿಕಾರಿಗಳು ಭಾಗವಹಿಸಿದ್ದರು.

ತುಪ್ಪದಲ್ಲಿ ಪೂಜಾರ್, ಸಿದ್ದಪ್ಪ, ವಕೀಲ ಹನುಮಂತಪ್ಪ ಸೇರಿದಂತೆ ಸ್ಲಂ ಮೋರ್ಚಾ, ಮಹಿಳಾ ಮೋರ್ಚಾ, ಯುವ ಮೋರ್ಚಾ, ಎಸ್ಸಿ ಮೋರ್ಚಾ, ಎಸ್ಟಿ ಮೋರ್ಚಾ, ಒಬಿಸಿ ಮೋರ್ಚಾ ಸೇರಿದಂತೆ ವಿವಿಧ ಮೋರ್ಚಾಗಳ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಒಟ್ಟಾರೆ, ಬರಪೀಡಿತ ಪಟ್ಟಿಗೆ ಜಗಳೂರನ್ನು ಸೇರ್ಪಡೆಗೊಳಿಸಬೇಕು ಹಾಗೂ ಭದ್ರಾ ಮೇಲ್ದಂಡೆ ಯೋಜನೆಗೆ ವೇಗ ನೀಡಬೇಕು ಎಂಬ ಬೇಡಿಕೆಯನ್ನು ಮುಂದಿಟ್ಟುಕೊಂಡು ನಡೆದ ಬಂದ್‌ನಲ್ಲಿ ಬೆಳಗ್ಗೆಯಿಂದಲೇ ವ್ಯಾಪಾರ ಚಟುವಟಿಕೆಗಳು ಸ್ಥಗಿತಗೊಂಡಿದ್ದು, ಪಟ್ಟಣದ ಜನಜೀವನದ ಮೇಲೆ ಬಂದ್‌ನ ಪರಿಣಾಮ ಸ್ಪಷ್ಟವಾಗಿ ಗೋಚರಿಸಿತು.

ಬರಪೀಡಿತ ತಾಲೂಕು ಪಟ್ಟಿಗೆ ಜಗಳೂರು ಸೇರ್ಪಡೆಗೆ ಆಗ್ರಹ

ರಾಷ್ಟ್ರೀಯ ಹೆದ್ದಾರಿ ಬಂದ್ ಮಾಡಿ ರೈತರ ಪ್ರತಿಭಟನೆ; ಲಾರಿಗಳ ಸಾಲು

"ಮುಂಜಾನೆಯ ಮೆರಗು"

ಜಗಳೂರು ಸೆ, 21– ಜಗಳೂರು ತಾಲೂಕನ್ನು ಬರಪೀಡಿತ ತಾಲೂಕುಗಳ ಪಟ್ಟಿಗೆ ಸೇರ್ಪಡೆಗೊಳಿಸಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘದ ಹುಚ್ಚವ್ವನಹಳ್ಳಿ ಮಂಜುನಾಥ್ ಬಣದ ವತಿಯಿಂದ ಸೋಮವಾರ ರಾಷ್ಟ್ರೀಯ ಹೆದ್ದಾರಿ ಬಂದ್ ಮಾಡಿ ಪ್ರತಿಭಟನೆ ನಡೆಸಲಾಯಿತು.

ಸೋಮವಾರ ಬೆಳಗ್ಗೆ ಸುಮಾರು 11 ಗಂಟೆಗೆ ತಾಲೂಕಿನ ಕಾನನಕಟ್ಟೆ ಗ್ರಾಮದ ಸಮೀಪ ರೈತ ಸಂಘದ ಪದಾಧಿಕಾರಿಗಳು ಹಾಗೂ ರೈತರು ರಾಷ್ಟ್ರೀಯ ಹೆದ್ದಾರಿಗೆ ಆಗಮಿಸಿ ರಸ್ತೆ ತಡೆ ನಡೆಸಿದರು. ಇದರಿಂದ ಹೆದ್ದಾರಿಯಲ್ಲಿ ವಾಹನ ಸಂಚಾರ ಕೆಲಕಾಲ ಅಸ್ತವ್ಯಸ್ತಗೊಂಡಿದ್ದು, ರಸ್ತೆಯ ಎರಡೂ ಬದಿಗಳಲ್ಲಿ ಲಾರಿಗಳು ಹಾಗೂ ಇತರೆ ವಾಹನಗಳು ಸಾಲುಗಟ್ಟಿ ನಿಂತಿದ್ದವು.

ರೈತ ಸಂಘದ ತಾಲೂಕು ಪ್ರಧಾನ ಕಾರ್ಯದರ್ಶಿ ರಾಜನಟ್ಟಿ ರಾಜ್ಯ ಮಾತನಾಡಿ, ಜಗಳೂರು ತಾಲೂಕಿನಲ್ಲಿ ಮಳೆ ಕೊರತೆಯಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಸಾವಿರಾರು ಎಕರೆ ಪ್ರದೇಶದಲ್ಲಿ ಬಿತ್ತನೆ ಮಾಡಲಾಗಿದ್ದ ಬೆಳೆಗಳು ಮಳೆಯಿಲ್ಲದೆ ಒಣಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಇಂತಹ ಸಂದರ್ಭದಲ್ಲಿ ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರ್ಪಡೆಗೊಳಿಸಿ ರೈತರಿಗೆ ಸರ್ಕಾರದಿಂದ ದೊರೆಯಬೇಕಾದ ಪರಿಹಾರ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ನವ ನಿರ್ಮಾಣ ವೇದಿಕೆಯ ರಾಜ್ಯಾಧ್ಯಕ್ಷ ಮಹಾಲಿಂಗಪ್ಪ ಮಾತನಾಡಿ, ಜಗಳೂರು ತಾಲೂಕಿನ ರೈತರ ಸಮಸ್ಯೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ಮಳೆ ಕೊರತೆ, ನೀರಿನ ಅಭಾವ ಹಾಗೂ ಬೆಳೆ ನಷ್ಟದಿಂದ ರೈತರು ಸಂಕಷ್ಟದಲ್ಲಿದ್ದು, ಕೂಡಲೇ ಸರ್ಕಾರ ಸೂಕ್ತ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿಭಟನಾಕಾರರ ಬಂಧನ

ರಾಷ್ಟ್ರೀಯ ಹೆದ್ದಾರಿ ಬಂದ್ ಮಾಡಿ ಪ್ರತಿಭಟನೆ ನಡೆಸುತ್ತಿದ್ದ ರೈತ ಸಂಘದ ಪದಾಧಿಕಾರಿಗಳು ಹಾಗೂ ಪ್ರತಿಭಟನಾಕಾರರನ್ನು ಪೊಲೀಸರು ವಶಕ್ಕೆ ಪಡೆದು ಕರೆದೊಯ್ದರು. ಈ ವೇಳೆ ಪ್ರತಿಭಟನಾಕಾರರು ಪೊಲೀಸ್ ಇಲಾಖೆಯ ಕ್ರಮದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ರೈತರ ಸಮಸ್ಯೆಗಳನ್ನು ಆಲಿಸುವ ಬದಲು ಪ್ರತಿಭಟನಾಕಾರರನ್ನು ಬಂಧಿಸಿರುವುದು ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.



ಪ್ರತಿಭಟನೆಯ ಹಿನ್ನೆಲೆಯಲ್ಲಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಕೆಲಕಾಲ ವಾಹನಗಳ ಸಂಚಾರಕ್ಕೆ ತೊಂದರೆಯಾಯಿತು. ಪೊಲೀಸರು ಸ್ಥಳಕ್ಕೆ ತೆರಳಿ ಸಂಚಾರವನ್ನು ಸುಗಮಗೊಳಿಸಲು ಕ್ರಮ ಕೈಗೊಂಡರು.

ಈ ಸಂದರ್ಭದಲ್ಲಿ ರೈತ ಸಂಘದ ರಾಜ್ಯ ಮುಖಂಡ ಕಾನನಕಟ್ಟೆ ತಿಪ್ಪೇಸ್ವಾಮಿ, ಪದಾಧಿಕಾರಿಗಳಾದ ಗಂಗಣ್ಣ, ಕಸವನಹಳ್ಳಿ ನಾಗರಾಜ್, ಮಡ್ರಳ್ಳಿ ತಿಪ್ಪೇಸ್ವಾಮಿ, ಪರಶುರಾಮ ಸೇರಿದಂತೆ ರೈತ ಸಂಘದ ಹಲವು ಮುಖಂಡರು ಹಾಗೂ ರೈತರು ಉಪಸ್ಥಿತರಿದ್ದರು.

ಒಂದೇ ದಿನ ಎರಡು ಪ್ರತಿಭಟನೆ: 200 ಪೊಲೀಸರ ನಿಯೋಜನೆ

ಜಗಳೂರಿನಲ್ಲಿ ಒಂದೇ ದಿನ ಎರಡು ಪ್ರತ್ಯೇಕ ಪ್ರತಿಭಟನೆಗಳು ನಡೆಯುವ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆ ಮುಂಜಾಗ್ರತಾ ಕ್ರಮವಾಗಿ ಬಿಗಿ ಬಂದೋಬಸ್ತ್ ಕೈಗೊಂಡಿತ್ತು.

ಡಿವೈಎಸ್ಪಿ ಬಸವರಾಜ್ ನೇತೃತ್ವದಲ್ಲಿ ಐದು ಸಿಪಿಐಗಳು, ಆರು ಪಿಎಸ್‌ಐಗಳು, ಒಂಬತ್ತು ಎಎಸ್‌ಐಗಳು, 61 ಹೆಡ್ ಕಾನ್ಸ್‌ಟೇಬಲ್‌ಗಳು, 19 ಪೊಲೀಸ್ ಕಾನ್ಸ್‌ಟೇಬಲ್‌ಗಳು ಸೇರಿದಂತೆ ಡಿಆರ್ ವ್ಯಾನ್‌ಗಳು ಹಾಗೂ ಗೃಹರಕ್ಷಕ ದಳದ ಸಿಬ್ಬಂದಿಯನ್ನು ಒಳಗೊಂಡಂತೆ ಒಟ್ಟು ಸುಮಾರು 200 ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು.

ರಾಷ್ಟ್ರೀಯ ಹೆದ್ದಾರಿ ಬಂದ್ ಹಿನ್ನೆಲೆಯಲ್ಲಿ ಪೊಲೀಸರು ಸ್ಥಳದಲ್ಲಿ ಕಟ್ಟುನಿಟ್ಟಿನ ಭದ್ರತೆ ಕೈಗೊಂಡಿದ್ದು, ಪ್ರತಿಭಟನೆಯ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ವಹಿಸಿದರು.



ಜಗಳೂರು ಬಂದ್ ಹಿನ್ನೆಲೆ: ಶಾಲಾ–ಕಾಲೇಜುಗಳಿಗೆ ರಜೆ; ಸರ್ಕಾರಿ ಕಚೇರಿಗಳ ಬಾಗಿಲು ಮುಚ್ಚಿಸಿದ ಪ್ರತಿಭಟನಾಕಾರರು

"ಮುಂಜಾನೆಯ ಮೆರಗು"

ಜಗಳೂರು ಸೆ, 21– ತಾಲೂಕನ್ನು ಬರಪೀಡಿತ ಪ್ರದೇಶಗಳ ಪಟ್ಟಿಗೆ ಸೇರ್ಪಡೆಗೊಳಿಸಬೇಕು ಹಾಗೂ ಭದ್ರಾ ಮೇಲ್ದಂಡೆ ನೀರಾವರಿ ಯೋಜನೆಯ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಬೇಕು ಎಂದು ಒತ್ತಾಯಿಸಿ ಸೋಮವಾರ ಹಮ್ಮಿಕೊಂಡಿದ್ದ ಜಗಳೂರು ಬಂದ್ ಹಿನ್ನೆಲೆಯಲ್ಲಿ ಪಟ್ಟಣ ಸೇರಿದಂತೆ ತಾಲೂಕಿನಾದ್ಯಂತ ಬಂದ್ ವಾತಾವರಣ ನಿರ್ಮಾಣವಾಗಿತ್ತು.



ಬಂದ್‌ಗೆ ಮುನ್ನೆಚ್ಚರಿಕಾ ಕ್ರಮವಾಗಿ ಸರ್ಕಾರಿ ಹಾಗೂ ಖಾಸಗಿ ಶಾಲಾ–ಕಾಲೇಜುಗಳಿಗೆ ರಜೆ ಘೋಷಿಸಲಾಗಿತ್ತು. ಇದರಿಂದ ಬೆಳಗ್ಗೆಯಿಂದಲೇ ಶಾಲಾ–ಕಾಲೇಜುಗಳ ಆವರಣಗಳು ಬಹುತೇಕ ಖಾಲಿಯಾಗಿದ್ದವು. ವಿದ್ಯಾರ್ಥಿಗಳು ಹಾಗೂ ಪೋಷಕರಲ್ಲಿ ಗೊಂದಲ ಉಂಟಾಗದಂತೆ ಶಿಕ್ಷಣ ಸಂಸ್ಥೆಗಳಿಗೆ ಮುಂಚಿತವಾಗಿಯೇ ರಜೆ ಘೋಷಣೆ ಮಾಡಲಾಗಿತ್ತು.

ಇತ್ತ, ಸರ್ಕಾರಿ ಕಚೇರಿಗಳು ಮಾತ್ರ ಎಂದಿನಂತೆ ಕಾರ್ಯನಿರ್ವಹಿಸಲು ಬಾಗಿಲು ತೆರೆದಿದ್ದವು. ಆದರೆ ಬಂದ್‌ಗೆ ಬೆಂಬಲ ಸೂಚಿಸಿ ಪ್ರತಿಭಟನೆ ನಡೆಸುತ್ತಿದ್ದ ವಿವಿಧ ಸಂಘಟನೆಗಳ ಮುಖಂಡರು ಹಾಗೂ ಕಾರ್ಯಕರ್ತರು ಸರ್ಕಾರಿ ಕಚೇರಿಗಳಿಗೆ ತೆರಳಿ, ಸಿಬ್ಬಂದಿ ಮತ್ತು ಸಾರ್ವಜನಿಕರು ಹೊರಬರುವಂತೆ ಮನವಿ ಮಾಡಿದರು. ಬಳಿಕ ಕೆಲವು ಕಚೇರಿಗಳ ಬಾಗಿಲುಗಳನ್ನು ಮುಚ್ಚಿಸಿ ಬಂದ್‌ಗೆ ಸಹಕರಿಸುವಂತೆ ಒತ್ತಾಯಿಸಿದರು.

ಪ್ರತಿಭಟನಾಕಾರರು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಅಂಗಡಿ–ಮುಂಗಟ್ಟುಗಳನ್ನು ಮುಚ್ಚಿಸುವಂತೆ ಮನವಿ ಮಾಡಿದರು. ಬಂದ್ ಹಿನ್ನೆಲೆಯಲ್ಲಿ ಬಹುತೇಕ ವ್ಯಾಪಾರ–ವಹಿವಾಟು ಸ್ಥಗಿತಗೊಂಡಿದ್ದು, ಪಟ್ಟಣದಲ್ಲಿ ಜನ ಸಂಚಾರವೂ ವಿರಳವಾಗಿತ್ತು.

ಬರ ಪರಿಸ್ಥಿತಿಯಿಂದ ರೈತರು ಸಂಕಷ್ಟದಲ್ಲಿದ್ದು, ಜಗಳೂರು ತಾಲೂಕನ್ನು ಬರಪೀಡಿತ ಪ್ರದೇಶಗಳ ಪಟ್ಟಿಗೆ ಸೇರಿಸುವುದು, ರೈತರಿಗೆ ಸೂಕ್ತ ಪರಿಹಾರ ಹಾಗೂ ಬೆಳೆ ನಷ್ಟ ಪರಿಹಾರ ಒದಗಿಸುವುದು, ಭದ್ರಾ ಮೇಲ್ದಂಡೆ ಯೋಜನೆಯ ಕಾಮಗಾರಿಗೆ ವೇಗ ನೀಡುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಸರ್ಕಾರದ ಮುಂದಿಡಲಾಗಿದೆ ಎಂದು ಪ್ರತಿಭಟನಾಕಾರರು ತಿಳಿಸಿದರು.

ಬರಪೀಡಿತ ತಾಲೂಕುಗಳ ಪಟ್ಟಿಯಿಂದ ಕೈಬಿಟ್ಟಿರುವುದನ್ನು ಮರು ಪರಿಶೀಲಿಸುವಂತೆ ತಹಶೀಲ್ದಾರ್‌ಗೆ ಮನವಿ

"ಮುಂಜಾನೆಯ ಮೆರಗು"

ಜಗಳೂರು ಸೆ, 21– ಜಗಳೂರು ತಾಲೂಕನ್ನು ಬ